ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 188 ಶೀರ್ಷಿಕೆ ಕೋಡ್: ಕೆಎಆರ್ ಕೆಎನ್ 28269 ಚಿತ್ರದುರ್ಗ ದಿನಾಂಕ: 10–02–2024 ಶನಿವಾರ ಪುಟ: 4 ಬೆಲೆ : ರೂ.2–00
Volume - 01 Issue - 188 Title- Code: KARKAN 28269 Chitradurga Date: 10-02-2024 Saturday Page: 4 Price: Rs. 2-00

ಒಳಪುಟದ ಸುದ್ದಿಗಳು
ಫೆ.24ರಂದು ಹಿರಿಯೂರು ತೇರುಮಲ್ಲೇಶ್ವರ ಸ್ವಾಮಿ ರಥೋತ್ಸವ 2
ಸಣ್ಣ ಪ್ರಮಾಣದ ಉದ್ಯಮಗಳಿಂದ ಉದ್ಯೋಗ ಸೃಷ್ಟಿ: ಆನಂದ್ 3
ಗ್ಯಾರಂಟಿಗಳು ಯಾವುದೇ ಕಾರಣಕ್ಕೂ ನಿಲ್ಲುವುದಿಲ್ಲ: ಸಿಎಂ 4

ಸುದ್ದಿ, ಜಾಹಿರಾತಿಗೆ 9686622252

ಶುಭ ನುಡಿ

ಸಂಬಂಧ ಎನ್ನುವುದು ಬಡವ ಬಲ್ಲಿದ ಲೆಕ್ಕಾಚಾರದ ಮೇಲಿರಬಾರದು ನೆನಪಿರಲಿ ಕುಡಿಯಲು ಯೋಗ್ಯವಲ್ಲದ ನೀರು ಕೂಡ ಬೆಂಕಿಯನ್ನು ನಂದಿಸುತ್ತದೆ

» ಶುಭೋದಯ

ಫಾಸ್ಟ್ ನ್ಯೂಸ್

ಮಹರ್ಷಿ ವಾಲ್ಮೀಕಿ ರಥೋತ್ಸವಕ್ಕೆ ಶಾಸಕ ಟಿ.ರಘುಮೂರ್ತಿ ಚಾಲನೆ

ದಾವಣಗೆರೆ:ಜಿಲ್ಲೆಯ ಹರಿಹರ ತಾಲ್ಲೂಕಿನ ರಾಜನಹಳ್ಳಿ ಗುರುಪೀಠದಲ್ಲಿ ಶ್ರೀ ವಾಲ್ಮೀಕಿ ಪ್ರಸನ್ನಾನಂದಪುರಿ ಸ್ವಾಮೀಜಿ ಅವರ ನೇತೃತ್ವದಲ್ಲಿ ನಡೆಯುತ್ತಿರುವ ಶ್ರೀ ಮಹರ್ಷಿ ವಾಲ್ಮೀಕಿ ಜಾತ್ರಾ ಮಹೋತ್ಸವ ಪ್ರಯುಕ್ತ ಹಮ್ಮಿಕೊಂಡಿದ್ದ ರಥೋತ್ಸವಕ್ಕೆ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಅವರು ಚಾಲನೆ ನೀಡಿ ವಿಶೇಷ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಸ್ವಾಮೀಜಿಗಳ ಒಕ್ಕೂಟದ ಎಲ್ಲಾ ಸ್ವಾಮೀಜಿಗಳು, ಮುಖಂಡರು ಹಾಗೂ ಸಮಾಜದ ಮುಖಂಡರು ಮತ್ತು ಸಮಾಜದ ಬಂಧುಗಳು ಭಾಗವಹಿಸಿದ್ದರು.

ಬುಡಕಟ್ಟು ವಿವಿ ಸ್ಥಾಪನೆ ಆಗಬೇಕು ಎಂದ ಸತೀಶ್ ಜಾರಕಿಹೊಳಿ

ಸಚಿವ ಸತೀಶ್ ಜಾರಕಿಹೊಳಿ ಮಾತನಾಡಿದ್ದು, ಸಬ್ಸಿಡಿ ದರದಲ್ಲಿ ಪರಿಶಿಷ್ಟ ವರ್ಗದವರಿಗೆ ಭೂಮಿ ಕೊಡಬೇಕು. ಬುಡಕಟ್ಟು ವಿವಿ ಸ್ಥಾಪನೆ ಆಗಬೇಕು. ಸಹಕಾರ ಸಚಿವ ಕೆ.ಎನ್.ರಾಜಣ್ಣ ವಾಲ್ಮೀಕಿ ಸಮುದಾಯದ ಹುಲಿ. ವಾಲ್ಮೀಕಿ ಸಮುದಾಯದ ಬಹುತೇಕ ಎಲ್ಲಾ ಕೆಲಸ ಮಾಡಿದ್ದಾರೆ ಎಂದು ಹೇಳಿದ್ದಾರೆ.

ಚಿತ್ರದುರ್ಗ ತಾಲೂಕಿನ ವಾಲ್ಮೀಕಿ ಜಾತ್ರೆ ಸಮಿತಿಯ ಅಧ್ಯಕ್ಷರಾಗಿ ಯಶಸ್ವಿಯಾಗಿ ನಿರ್ವಹಿಸಿದೆ ಎ.ಟಿ.ತಿಪ್ಪೇಸ್ವಾಮಿ (ATS) ಅವರನ್ನು ಹರಿಹರದ ರಾಜನಹಳ್ಳಿಯಲ್ಲಿ ನಡೆದ ವಾಲ್ಮೀಕಿ ಜಾತ್ರೆಯಲ್ಲಿ ಶ್ರೀ ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿಗಳು ಸನ್ಮಾನಿಸಿ ಗೌರವಿಸಿದರು.

ಪ್ರಕರಣಗಳ ವಾಪಸಾತಿಗೆ ಸಿಎಂ ಸಿದ್ದರಾಮಯ್ಯ ಸೂಚನೆ

ಪರಿವಾರ, ತಳವಾರ ಜನಾಂಗದವರನ್ನು ಕೂಡಲೇ ಎಸ್ಟಿಗೆ ಸೇರಿಸಲು ತೀರ್ಮಾನ

» ಹರಿಹರ

ಮೈಸೂರು, ಚಾಮರಾಜನಗರ, ಕೊಡಗು, ಹಾಸನ, ಮಂಡ್ಯ, ಜಿಲ್ಲೆಗಳಲ್ಲಿರುವ ಪರಿವಾರ/ ತಳವಾರ ಜನಾಂಗದವರನ್ನು ಕೂಡಲೇ ಪರಿಶಿಷ್ಟ ಪಂಗಡಕ್ಕೆ ಸೇರಿಸಲು ತೀರ್ಮಾನ ಮಾಡಲಾಗಿದೆ. ಕೂಡಲೇ ಈ ಬಗ್ಗೆ ಸಭೆ ಕರೆದು ಕ್ರಮ ವಹಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದರು.ಅವರು ಇಂದು ರಾಜನಹಳ್ಳಿಯ ಶ್ರೀ ಮಹರ್ಷಿ ವಾಲ್ಮೀಕಿ ಗುರಪೀಠದ ವತಿಯಿಂದ ಯೋಜಿಸಿದ್ದ ಮಹರ್ಷಿ ವಾಲ್ಮೀಕಿ ಜಾತ್ರೆ– 2024 ಹಾಗೂ ಜನಜಾಗೃತಿ ಜಾಥಾ ಉದ್ಘಾಟಿಸಿ ಮಾತನಾಡಿದರು. ಕೇಂದ್ರ ಸರ್ಕಾರ ಈಗಾಗಲೇ ಈ ಸಮುದಾಯವನ್ನು ಎಸ್.ಟಿಗೆ ಸೇರ್ಪಡೆ ಮಾಡಿದೆ. ಇಲ್ಲಿ ಇನ್ನೂ ಪ್ರವರ್ಗದಲ್ಲಿರುವ ನಿಮ್ಮ ಮೇಲಿದ್ದ ಎಲ್ಲಾ ಪ್ರಕರಣಗಳನ್ನು ವಾಪಸ್ಸು ಪಡೆಯಲೂ ಸೂಚನೆ ನೀಡಲಾಗಿದೆ ಎಂದರು

ಬುದ್ಧಿವಂತಿಕೆ ಯಾರ ಸ್ವತ್ತಲ್ಲ: ಅಕ್ಷರ ಸಂಸ್ಕೃತಿಯಿಂದ ವಂಚಿತರಾದಾಗ ಸಾಮಾಜಿಕ ಆರ್ಥಿಕ ಅಸಮಾನತೆ ನಿರ್ಮಾಣವಾಗಿರುವುದು. ವಿದ್ಯೆ, ಬುದ್ಧಿವಂತಿಕೆ ಯಾರ ಸ್ವತ್ತಲ್ಲ. ಬುದ್ಧಿ, ಜ್ಞಾನ ಪಡೆದಾಗ ಸ್ವಾಭಿಮಾನಿಗಳಾಗಿ ಬದುಕಲು ಸಾಧ್ಯ. ಎಲ್ಲರಿಗೂ ಸಮಾನ ಎಂಬ ಭಾವ ಬರಲು ಸ್ವಾಭಿಮಾನ ಅಗತ್ಯ ಎಂದರು.

ಸಮಸಮಾಜ ನಿರ್ಮಾಣವಾದಾಗಲೇ ರಾಮರಾಜ್ಯದ ಸ್ಥಾಪನೆ: ಬೇಡ ಜನಾಂಗದಲ್ಲಿ ಜನಿಸಿದ ವಾಲ್ಮೀಕಿಯವರು ರಾಮಾಯಣವನ್ನು ರಚಿಸಿ ಮಹರ್ಷಿಯಾದರು. ರಾಮಾಯಣ ಮಹಾನ್ ಗ್ರಂಥ. ಮಹಾನ್ ಗ್ರಂಥಗಳನ್ನು ಮೇಲ್ಜಾತಿಯವರು ಮಾತ್ರ ರಚಿಸಲು ಸಾಧ್ಯವೆಂಬ ಪ್ರತೀತಿಯಿತ್ತು. ಆದರೆ ಕಾವ್ಯಸಾಹಿತ್ಯವನ್ನು ಶೂದ್ರರು ರಚಿಸಬಹುದೆಂಬುದನ್ನು ಮಹರ್ಷಿ ವಾಲ್ಮೀಕಿನಿರೂಪಿಸಿದರು.ಶ್ರೀರಾಮಚಂದ್ರನ ಕಾಲದಲ್ಲಿಯೇ ಸಮಾನ ಸಮಾಜದ ಹಾಗೂ ಪ್ರಜಾಪ್ರಭುತ್ವದ ಪರಿಕಲ್ಪನೆಯಿತ್ತು. ಪ್ರಜೆಗಳೇಆಡಳಿತನಡೆಸುವಪ್ರಜಾಪ್ರಭುತ್ವದ ಮೂಲವನ್ನು ರಾಮಾಯಣದಲ್ಲಿ ಕಾಣಬಹುದು. ಬಸವಾದಿ ಶರಣರು ತಿಳಿಸಿದಂತೆ ವರ್ಗರಹಿತ, ಜಾತಿರಹಿತ, ಸಮಾನ ಅವಕಾಶ ನೀಡುವ ಸಮಾಜ ನಿರ್ಮಾಣವಾದಾಗ ರಾಮರಾಜ್ಯ ಎಂದು ಹೇಳಬಹುದು.

ಸಹಿಷ್ಣುತೆ ಹಾಗೂ ಸಹಬಾಳ್ವೆ: ಇಂದು ಜಾತಿ ಜಾತಿಗಳನ್ನು ಒಡೆಯುವ ಕೆಲಸವನ್ನು ಪಟ್ಟಭದ್ರಹಿತಾಸಕ್ತಿಗಳುಮಾಡುತ್ತಿವೆ.ಸಮಸಮಾಜದ ಆಶಯವನ್ನೇ ಸಂವಿಧಾನ ಪ್ರತಿಪಾದಿಸುತ್ತದೆ. ಸಂವಿಧಾನದ ಆಶಯಗಳನ್ನು ಜಾರಿಗೆ ತರುವುದೇ ಸರ್ಕಾರದ ಗುರಿಯಾಗಿದೆ. ಸಹಿಷ್ಣುತೆ ಹಾಗೂ ಸಹಬಾಳ್ವೆಯನ್ನು ಮಾಡಬೇಕೆಂದು ಸಂವಿಧಾನ ಹೇಳುತ್ತದೆ. ಎಸ್ ಸಿ , ಎಸ್ ಟಿ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರಿಗೆ ಸರಿಯಾದ ಅವಕಾಶ ದೊರೆತಲ್ಲಿ ಉತ್ತಮವಾಗಿ ಜೀವನ ರೂಪಿಸಿಕೊಳ್ಳುತ್ತಿದ್ದರು.

ಅಯೋಧ್ಯೆಯ ವಾಲ್ಮೀಕಿ ಮಂದಿರದಲ್ಲಿ 23000 ಶ್ಲೋಕಗಳ ಕೆತ್ತನೆ: ಬೊಮ್ಮಯಿ

ದಾವಣಗೆರೆ ಜಿಲ್ಲೆಯ ಹರಿಹರ ತಾಲೂಕಿನ ರಾಜನಹಳ್ಳಿಯಲ್ಲಿ ನಡೆದ ವಾಲ್ಮೀಕಿ ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರು ಪಾಲ್ಗೊಂಡು ಮಾತನಾಡಿದರು. ಈ ಸಂದರ್ಭದಲ್ಲಿ ಪ್ರತಿಪಕ್ಷದ ನಾಯಕ ಆರ್. ಅಶೋಕ್, ಮಾಜಿ ಸಚಿವ ರಾಜುಗೌಡ, ವಾಲ್ಮೀಕಿ ಪೀಠಾಧ್ಯಕ್ಷ ಪ್ರಸನ್ನಾನಂದಪುರಿ ಸ್ವಾಮೀಜಿ ಹಾಜರಿದ್ದರು.

» ದಾವಣಗೆರೆ

ಅಯೋಧ್ಯೆಯಲ್ಲಿ ವಾಲ್ಮೀಕಿ ಮಂದಿರ ನಿರ್ಮಾಣ ಆಗಲಿದೆ. ವಾಲ್ಮೀಕಿ ಮಂದಿರ ನಿರ್ಮಾಣದಲ್ಲಿ 23 ಸಾವಿರ ಶ್ಲೋಕಗಳನ್ನು ಕೆತ್ತನೆ ಮಾಡಿಸಲಾಗುವುದು. ಈ ವಿಚಾರ ಪ್ರಧಾನಿ ನರೇಂದ್ರ ಮೋದಿ ಹಾಗೂ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ಗಮನಕ್ಕೆ ತರುತ್ತೇನೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ಹೇಳಿದರು.

ವಾಲ್ಮೀಕಿ ಜಾತ್ರೆ ಪ್ರಯುಕ್ತ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಬಸವರಾಜ ಬೊಮ್ಮಾಯಿ ಅವರು ಚಿತ್ರದುರ್ಗದ ಸಾಹಿತಿ ಬಿಎಲ್ ವೇಣು ಅವರಿಗೆ ವಾಲ್ಮೀಕಿ ಗುರುಪೀಠದಿಂದ ಕೊಡಮಾಡಿದ ಒಂದು ಲಕ್ಷ ರೂಪಾಯಿ ನಗದು ಒಳಗೊಂಡ ವೀರ ರಾಜಾ ಮದಕರಿ ನಾಯಕ ಪ್ರಶಸ್ತಿ ಪ್ರದಾನ ಮಾಡಿದರು.ಬಳಿಕ ಮಾತನಾಡಿದ ಅವರು, ಮುಂದಿನ ಅವಧಿಗೂ ಪ್ರಧಾನಿ ನರೇಂದ್ರ ಮೋದಿ ಅವರೇ ಮುಂದುವರೆಯಲಿದ್ದಾರೆ. ವಾಲ್ಮೀಕಿ ಸಮಾಜಕ್ಕೆ ಶೇ 7.5 ಮೀಸಲಾತಿ ಹೆಚ್ಚಾಗುತ್ತದೆ. ಮೀಸಲಾತಿ ಹೆಚ್ಚಳಕ್ಕೆ ಅಗತ್ಯ ಇರುವ ಒಂಬತ್ತನೇ ಪರಿಚ್ಛೇದನಕ್ಕೆ ಸೇರ್ಪಡೆ ಮಾಡಿಸುತ್ತೇವೆ. ನಾನು ಮುಖ್ಯಮಂತ್ರಿ ಆಗಿದ್ದಾಗ ಕೇಂದ್ರಕ್ಕೆ ಶಿಪಾರಸ್ಸು ಮಾಡಿದ್ದೆ. ಹಾಲಿ ಕಾಂಗ್ರೆಸ್ ಸರ್ಕಾರದಿಂದ ಕೇಂದ್ರಕ್ಕೆ ಬೇಕಾದ ಶಿಪಾರಸ್ಸು ಮಾಡಿಸಿ. ಅಧಿಕಾರ ಎಂಬುದು ಶಾಶ್ವತವಲ್ಲ. ನಾನು ಸಿಎಂ ಆಗಿದ್ದಾಗ ಇಂದೇ ಕೊನೆಯ ದಿನ ಎಂದು ಕೆಲಸ ಮಾಡಿದ್ದೆ ಎಂದರು.

ವಾಲ್ಮೀಕಿ ಬರೆದ ರಾಮಾಯಣ ಜಗತ್ತಿನ 10 ಶ್ರೇಷ್ಠ ಕೃತಿಗಳಲ್ಲಿ ಒಂದು. ಚಿತ್ರದುರ್ಗದ ಮದಕರಿ ಪರಂಪರೆ ಹಿನ್ನೆಲೆ ವಾಲ್ಮೀಕಿ ಜನಾಂಗಕ್ಕೆ ಇದೆ. ಇಂದು ದೇಶ ಒಂದಾಗಿ ಉಳಿಯಲು ಮೂಲ ಕಾರಣ ವಾಲ್ಮೀಕಿ ಕುಲಕ್ಕೆ ಇದೆ. ವಾಲ್ಮೀಕಿ ಜನಾಂಗ ಮೊದಲು ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಇರಲಿಲ್ಲ. ಕೇಂದ್ರಕ್ಕೆ ಶಿಪಾರಸ್ಸು ಮಾಡಿದ್ದು ರಾಮಕೃಷ್ಣ ಹೆಗಡೆ. ಕೇಂದ್ರದಲ್ಲಿ ಚಂದ್ರಶೇಖರ ನೇತೃತ್ವದ ಸರ್ಕಾರ ಇತ್ತು. ಇದನ್ನೆ ಒತ್ತಾಯ ಮಾಡಿ ಪಟ್ಟಿಗೆ ಸೇರಿದ್ದು ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡರು. ಇದೀಗ ವಾಲ್ಮೀಕಿ ಮೀಸಲಾತಿ ಹೆಚ್ಚಾಗ ಬೇಕು. ಇದಕ್ಕೆ ಸಂವಿಧಾನಕ್ಕೆ ತಿದ್ದುಪಡಿ ತರಬೇಕಾಗಿದೆ ಎಂದರು.

ಮೊದಲು ವಾಲ್ಮೀಕಿ ಮಂದಿರ ಕಟ್ಟಬೇಕಿತ್ತು: ಸಚಿವ ಕೆಎನ್ ರಾಜಣ್ಣ

ಶ್ರೀರಾಮನ ಬಗ್ಗೆ ಜಗತ್ತಿಗೆ ತಿಳಿಸಿದ್ದೇ ವಾಲ್ಮೀಕಿ. ಹೀಗಾಗಿ ರಾಮಮಂದಿರಕ್ಕೂ ಮೊದಲು ವಾಲ್ಮೀಕಿ ಮಂದಿರ ಕಟ್ಟಬೇಕಿತ್ತು ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ಹೇಳಿದ್ದಾರೆ. ಜಿಲ್ಲೆಯ ಹರಿಹರ ತಾಲೂಕಿನ ರಾಜನಹಳ್ಳಿಯಲ್ಲಿ ನಡೆದ ವಾಲ್ಮೀಕಿ ಜಾತ್ರೆಯಲ್ಲಿ ಮಾತನಾಡಿ ಅವರು, ವಾಲ್ಮೀಕಿ ಸಮುದಾಯದ ಮೂವರಿಗೆ ಸಚಿವ ಸ್ಥಾನ ನೀಡಿದ್ದಾರೆ. ರಾಜ್ಯದಲ್ಲಿ 100 ದೇವಸ್ಥಾನಗಳ ಜೀರ್ಣೋದ್ಧಾರ ಮಾಡಲಾಗುತ್ತಿದೆ ಎಂದು ತಿಳಿಸಿದರು. ಸಚಿವ ಕೆ.ಹೆಚ್.ಮುನಿಯಪ್ಪ ಮಾತನಾಡಿ, ಶ್ರೀರಾಮನ ಹೆಸರಿನಲ್ಲಿ ಬಿಜೆಪಿ ರಾಜಕೀಯ ಮಾಡುತ್ತಿದೆ. ನಾವು ಕೂಡ ರಾಮ ಭಕ್ತರೇ. ಆದರೆ ರಹೀಮನನ್ನೂ ಅಷ್ಟೇ ಪ್ರೀತಿಯಿಂದ ನೋಡುತ್ತೇವೆ. ರಾಮನ ಹೆಸರಲ್ಲಿ ರಾಜಕೀಯ ಮಾಡುವುದನ್ನ ಬಿಡಬೇಕು ವಾಗ್ದಾಳಿ ಮಾಡಿದ್ದಾರೆ.

ವಾಲ್ಮೀಕಿ ವಿವಿ ಆಗಲೇಬೇಕು: ಸಚಿವ

ಗೃಹ ಇಲಾಖೆ ಸಚಿವ ಡಾ.ಜಿ.ಪರಮೇಶ್ವರ್ ಮಾತನಾಡಿ, ರಾಜ್ಯದಲ್ಲಿ ವಾಲ್ಮೀಕಿ ವಿವಿ ಆಗಲೇಬೇಕು. ವಾಲ್ಮೀಕಿ ವಿವಿ ಸ್ಥಾಪನೆಗೆ ಈ ಬಾರಿ ಬಜೆಟ್‌ನಲ್ಲಿ ಘೋಷಿಸಬೇಕು. ಸಿಎಂ ಸಿದ್ದರಾಮಯ್ಯ ಬಿಟ್ಟರೆ ಬೇರೆ ಯಾರೂ ಇದನ್ನು ಮಾಡಲ್ಲ. ರಾಮನಿಗೆ ಸಂಬಂಧವೇ ಇಲ್ಲದವರು ಏನೇನೋ ಮಾಡುತ್ತಿದ್ದಾರೆ. ನಮಗೆ ಸಂಬಂಧ ಇದೆ, ಹೀಗಾಗಿ ವಾಲ್ಮೀಕಿ ವಿವಿ ಸ್ಥಾಪನೆ ಆಗಬೇಕು ಎಂದು ಹೇಳಿದ್ದಾರೆ. ಸಮಾನತೆ ಪ್ರತಿಪಾದನೆ ಮಾಡಿದರೂ ಜಾತಿ ವ್ಯವಸ್ಥೆ ಜೀವಂತ ಇದೆ. ಆಂಧ್ರ, ಪಂಜಾಬ್‌ನಲ್ಲಿ ವಾಲ್ಮೀಕಿ ಸಮಾಜ ಹೆಚ್ಚಿನ ಸಂಖ್ಯೆಯಲ್ಲಿದೆ. ವಾಲ್ಮೀಕಿ ಸಮುದಾಯಕ್ಕೆ ಮೀಸಲಾತಿ ಹೆಚ್ಚಳ ಮಾಡುವ ವಿಚಾರದಲ್ಲಿ ಆಗಿನ ಸಿಎಂ ಹೆಚ್‌ಡಿ ಕುಮಾರಸ್ವಾಮಿ ನಿರೀಕ್ಷಿತ ಪ್ರಮಾಣದಲ್ಲಿ ಸ್ಪಂದಿಸಲಿಲ್ಲ ಎಂದಿದ್ದಾರೆ.

ಬ್ಯಾಕ್‌ಲಾಗ್ ಹುದ್ದೆ ಭರ್ತಿ ಮಾಡಲು ಸ್ವಾಮೀಜಿ ಆಗ್ರಹ

ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಸ್ವಾಮೀಜಿ ಮಾತನಾಡಿ, ರಾಜ್ಯದ ಯಾವುದಾದರೂ ವಿವಿಗೆ ಮಹರ್ಷಿ ವಾಲ್ಮೀಕಿ ಹೆಸರಿಡಬೇಕು. ಅದಕ್ಕಿಂತ ಮುಖ್ಯವಾಗಿ SC, ST ಬ್ಯಾಕ್‌ಲಾಗ್ ಹುದ್ದೆ ಭರ್ತಿ ಮಾಡಬೇಕು ಎಂದು ರಾಜ್ಯ ಸರ್ಕಾರಕ್ಕೆ ಆಗ್ರಹಿಸಿದ್ದಾರೆ. ವಾಲ್ಮೀಕಿ ಸ್ವಾಮೀಜಿ ನಿರಂತರ ಹೋರಾಟದಿಂದ ಮೀಸಲಾತಿ ಹೆಚ್ಚಿಸಿದರು. ಬೆಂಗಳೂರಿನಲ್ಲಿ ಹೋರಾಟದಿಂದ ಮೀಸಲಾತಿ ಪ್ರಮಾಣ ಹೆಚ್ಚಿಸಿದ್ದರು ಎಂದರು. ದೇಶದಾದ್ಯಂತ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದವರು ಇದ್ದಾರೆ. ಕರ್ನಾಟಕದಲ್ಲಿ ಖಅ, ಖಖ ಮೀಸಲಾತಿ ಪ್ರಮಾಣ 24%ಗೆ ಹೆಚ್ಚಿಸಲಾಗಿದೆ. ಇದೇ ಮಾದರಿಯಲ್ಲಿ ಬೇರೆ ರಾಜ್ಯಗಲ್ಲಿ ಮೀಸಲಾತಿ ಪ್ರಮಾಣ ಹೆಚ್ಚಿಸಿ. ಕೇಂದ್ರ ಸರ್ಕಾರವೂ ಮೀಸಲಾತಿ ಪ್ರಮಾಣ ಹೆಚ್ಚಿಸಬೇಕು. ಮುಂದಿನ ವರ್ಷ ಪರಿವಾರ, ತಳವಾರರನ್ನು ಎಸ್‌ಟಿಗೆ ಸೇರಿಸುವಂತೆ ಆಗ್ರಹಿಸಿದ್ದಾರೆ.

ಚಿನ್ನದ ಬೆಲೆ	
91.6 ಕೆಡಿಎಂ (ಗ್ರಾಂ)	5830
85 ಕೆಡಿಎಂ (ಗ್ರಾಂ)	5330

ಬೆಳ್ಳಿ ಬೆಲೆ	
ಕೆಜಿ	67500

ಫಾಸ್ಟ್ ನ್ಯೂಸ್

ಫೆ.10ರಂದು ಕಾಯಕ ಶರಣರ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಮಾದಾರ ಚೆನ್ನಯ್ಯ, ಮಾದರ ಧೂಳಯ್ಯ, ಡೋಹರ ಕಕ್ಕಯ್ಯ, ಉರಿಲಿಂಗ ಪೆದ್ದಿ ಹಾಗೂ ಸಮಗಾರ ಹರಳಯ್ಯ ಮೊದಲಾದ ಕಾಯಕ ಶರಣರ ಜಯಂತಿ ಆಚರಣೆ ಸಮಾರಂಭವನ್ನು ಇದೇ ಫೆ.10ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ರಾಜ್ಯ ಸಚಿವರು ಹಾಗೂ ಚಿತ್ರದುರ್ಗ ಸಂಸದ ಎ.ನಾರಾಯಣಸ್ವಾಮಿ ಘನಉಪಸ್ಥಿತಿವಹಿಸುವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟನೆ ನೆರವೇರಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ ಭಾಷಾ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಡಾ.ಎಂ.ಚಂದ್ರಪ್ಪ, ಎನ್.ವೈ. ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ.ನಾರಾಯಣಸ್ವಾಮಿ, ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಅಟ್ರಾಸಿಟಿ ಕಮಿಟಿ ಮಾಜಿ ಸದಸ್ಯ ಹಾಗೂ ದಲಿತ ಮುಖಂಡ ಬಿ.ರಾಜಪ್ಪ, ನಗರಸಭಾ ಮಾಜಿ ಅಧ್ಯಕ್ಷರಾದ ಡಿ.ಎನ್.ಮೈಲಾರಪ್ಪ, ಹೆಚ್.ಸಿ.ನಿರಂಜನಮೂರ್ತಿ, ಕಣಿವೆ ಮಾರಮ್ಮ ಕನ್ನಡ ಅಭಿಮಾನಿಗಳ ಸಂಘದ ಅಧ್ಯಕ್ಷ ಎಂ.ತಿಪ್ಪೇಸ್ವಾಮಿ ಸೇರಿದಂತೆ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು, ದಲಿತ ಮುಖಂಡರು ಹಾಗೂ ಗಣ್ಯರು ಭಾಗವಹಿಸುವರು. ರಾಂಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಉಪನ್ಯಾಸಕ ಡಾ.ಎಂ.ವೇದಾಂತ ಎಳಂಜಿ ಹಾಗೂ ಸಾಹಿತಿ ಹೆಚ್.ಆನಂದ್ ಕುಮಾರ್ ಅವರು ಉಪನ್ಯಾಸ ನೀಡುವರು. ಚಿತ್ರದುರ್ಗದ ಕೆ.ಗಂಗಾಧರ್ ಮತ್ತು ತಂಡದಿಂದ ಗೀತಗಾಯನ ನಡೆಸಿಕೊಡುವರು. ಜಯಂತಿ ಅಂಗವಾಗಿ ಅಂದು ಬೆಳಿಗ್ಗೆ 9 ರಿಂದ ಮದಕರಿ ನಾಯಕ ವೃತ್ತದಿಂದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತ, ಓಬವ್ವ ವೃತ್ತದ ಮೂಲಕ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಜಾನಪದ ಕಲಾತಂಡಗಳೊಂದಿಗೆ ಮೆರವಣಿಗೆ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ತಿಳಿಸಿದ್ದಾರೆ.

ಫೆ.15ರಂದು ಸೇವಾಲಾಲ್ ಜಯಂತಿ ಆಚರಣೆ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಸಂತ ಶ್ರೀ ಸೇವಾಲಾಲ್ ಜಯಂತಿ ಆಚರಣೆ ಸಮಾರಂಭವನ್ನು ಇದೇ ಫೆ.15ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ರಾಜ್ಯ ಸಚಿವರು ಹಾಗೂ ಚಿತ್ರದುರ್ಗ ಸಂಸದ ಎ.ನಾರಾಯಣಸ್ವಾಮಿ ಘನಉಪಸ್ಥಿತಿವಹಿಸುವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟನೆ ನೆರವೇರಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ ಭಾಷಾ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಡಾ.ಎಂ.ಚಂದ್ರಪ್ಪ, ಎನ್.ವೈ.ಗೋಪಾಲಕೃಷ್ಣ, ವಿಧಾನ ಪರಿಷತ್ ಸದಸ್ಯರಾದ ಡಾ.ವೈ.ಎ.ನಾರಾಯಣಸ್ವಾಮಿ, ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಜಿಲ್ಲಾ ಬಂಜಾರ (ಲಂಬಾಣಿ) ಸಂಘದ ಅಧ್ಯಕ್ಷ ಆರ್.ನಾಗೇಂದ್ರನಾಯ್ಕ್, ಗೌರವಾಧ್ಯಕ್ಷ ಜಿ.ರಾಜನಾಯ್ಕ್, ಕಾರ್ಯದರ್ಶಿ ಕೆ.ಮಂಜುನಾಥನಾಯ್ಕ್, ಸಂತ ಸೇವಾಲಾಲ್ ಜನ್ಮಸ್ಥಾನ ಮಹಾಮಠ ಸಮಿತಿ ಪ್ರಧಾನ ಕಾರ್ಯದರ್ಶಿ ನರೇನಹಳ್ಳಿ ಅರುಣ್ ಕುಮಾರ್ ಸೇರಿದಂತೆ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು, ಜಿಲ್ಲೆಯ ಬಂಜಾರ (ಲಂಬಾಣಿ) ಸಮಾಜದ ಸಮಸ್ತ ಗೌರವಾನ್ವಿತ ಮುಖಂಡರು ಹಾಗೂ ಗಣ್ಯರು ಭಾಗವಹಿಸುವರು. ಕನ್ನಡ ಉಪನ್ಯಾಸಕ ಟಿ.ಎಲ್.ನಾರಾಯಣ್ ನಾಯ್ಕ್ ಉಪನ್ಯಾಸ ನೀಡುವರು. ಚಿತ್ರದುರ್ಗ ತಾಲ್ಲೂಕು ಆಯಿತೋಳು ಜಗದೀಶ್ ಮತ್ತು ತಂಡದವರು ಗೀತಗಾಯನ ನಡೆಸಿಕೊಡುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ತಿಳಿಸಿದ್ದಾರೆ.

ಪತಿಯೊಂದಿಗೆ ಮುನಿಸು : ನಾಪತ್ತೆಯಾದ ಪತ್ನಿ

» ಚಳ್ಳಕೆರೆ

ತಾಲ್ಲೂಕಿನ ಬೊಮ್ಮಸಮುದ್ರ ಗ್ರಾಮದಲ್ಲಿ ಶೋಭಾ(32) ಎಂಬ ಗೃಹಿಣಿ ಮನೆಯಿಂದ ನಾಪತ್ತೆಯಾಗಿದ್ದು, ತನ್ನ ಗಂಡನೊಂದಿಗೆ ಆಗಾಗ ಜಗಳವಾಡುತ್ತಿದ್ದ ಈಕೆ ಮನನೊಂದು ಮನೆಯಿಂದ ನಾಪತ್ತೆಯಾಗಿರುತ್ತಾರೆ. ಶೋಭಾಳ ಗಂಡ ಎಸ್.ರಾಜಪ್ಪ ಈ ಬಗ್ಗೆ ಪೊಲೀಸರಿಗೆ ದೂರು ನೀಡಿ ಕಳೆದ 12ವರ್ಷಗಳ ಹಿಂದೆ ನನ್ನ ಅಕ್ಕಳ ಮಗಳಾದ ಶೋಭಾಳನ್ನು ಮದುವೆಯಾಗಿ ಇಬ್ಬರು ಗಂಡುಮಕ್ಕಳಿದ್ದು, ಆಗಾಗ ನನ್ನೊಂದಿಗೆ ಮುನಿಸಿಕೊಂಡು ತನ್ನತವರು ಮನೆ ಕಾಮಸಮುದ್ರಕ್ಕೆ ತೆರಳುತ್ತಿದ್ದಳು. ಫೆ.1ರ ಗುರುವಾರ ಬೆಳಗಿನ ಜಾವ ಯಾರೂ ತಿಳಿಸದೆ ಮನೆಗೆ ಹೊರಟುಹೋಗಿದ್ದು, ಎಲ್ಲೆಡೆ ಹುಡುಕಿ ಸಿಗದೇಇದ್ದಾಗ ಪೊಲೀಸರಿಗೆ ದೂರು ನೀಡಲಾಗಿದೆ.

ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಕರೆ

ಲಿಂಗ ಅನುಪಾತದ ಅಸಮತೋಲನ ಸರಿದೂಗಿಸಿ

» ಚಿತ್ರದುರ್ಗ

ಹೆಣ್ಣು ಮಕ್ಕಳ ಸಾಮಾಜಿಕ ಸ್ಥಾನಮಾನ ಬಲಪಡಿಸಿ, ಲಿಂಗ ಅನುಪಾತದ ಅಸಮತೋಲನ ಸರಿದೂಗಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಕರೆ ನೀಡಿದರು.

ಹೊಸದುರ್ಗ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಕ್ಷೇತ್ರಮಟ್ಟದಲ್ಲಿ ಕಾರ್ಯನಿರ್ವಹಿಸುವ ಆಶಾ ಕಾರ್ಯಕರ್ತೆಯರಿಗೆ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳಿಗೆ ಗರ್ಭ ಪೂರ್ವ ಪ್ರಸವ ಪೂರ್ವ ಲಿಂಗ ಪತ್ತೆ ಅನುಶಾಸನ ಕಾಯ್ದೆ ಬಗ್ಗೆ ಅರಿವು ಮೂಡಿಸುವ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಮುದಾಯದಲ್ಲಿ ಆರೋಗ್ಯ, ಮಾಹಿತಿ ಶಿಕ್ಷಣ ಬಲಪಡಿಸಿ ಸರ್ಕಾರದ ಯೋಜನೆಗಳು ಬೇಟಿ ಬಜಾವ್, ಬೇಟಿ ಪಡಾವೋ, ಸುಕನ್ಯಾ ಸಮೃದ್ಧಿ ಯೋಜನೆ, ಭ್ರೂಣ ಲಿಂಗಪತ್ತೆ ಕಾಯ್ದೆಗಳ ಬಗ್ಗೆ ಹೆಚ್ಚು ಹೆಚ್ಚು ಅರಿವು ಮೂಡಿಸಿ ಎಂದು ಹೇಳಿದರು.ಜಿಲ್ಲೆಯಲ್ಲಿ ಲಿಂಗಾನುಪಾತ 2011ರ ಜನಗಣತಿಯಂತೆ 1000 ಗಂಡು ಮಕ್ಕಳಿಗೆ 949 ಹೆಣ್ಣುಮಕ್ಕಳ ಜನನವಾಗುತ್ತಿದೆ. ಮಹಿಳೆಯರ ಇಳಿಮುಖಕ್ಕೆ ಹಲವಾರು ಕಾರಣಗಳಿವೆ. ಮುಖ್ಯವಾಗಿ ಬಾಲ್ಯ ವಿವಾಹ, ಚಿಕ್ಕ ವಯಸ್ಸಿನಲ್ಲಿ ಮಹಿಳೆ ಗರ್ಭಿಣಿಯಾಗಿ ಹೆರಿಗೆ ಸಂದರ್ಭದಲ್ಲಿ ಮರಣವಾಗುವ ಸಂಭವ ಜಾಸ್ತಿ, ಗಂಡುಮಗು ಬೇಕೆನ್ನುವ ಹಂಬಲ, ಪೋಷಕರಿಗೆ ಹೆಣ್ಣುಮಕ್ಕಳ ಬಗ್ಗೆ ಇರುವ ಅಲಕ್ಷತೆ, ಹೆಣ್ಣುಮಕ್ಕಳ ಅನಕ್ಷರತೆ ಪ್ರಮುಖ ಕಾರಣವಾಗಿದೆ ಎಂದು ಹೇಳಿದರು. ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೆ.ಆರ್.ಗೌರಮ್ಮ ಮಾತನಾಡಿ, ಗರ್ಭಿಣಿ ಆರೈಕೆಯ ಬಗ್ಗೆ ತಿಳಿಸುತ್ತಾ, ಮುಂಚೂಣಿ ಕಾರ್ಯಕರ್ತರು, ಗರ್ಭಿಣಿ ನೋಂದಾವಣಿ ಸಮಯದಲ್ಲೇ ಆಪ್ತಸಮಾಲೋಚನೆ ನಡೆಸಿ, ಭ್ರೂಣ ಲಿಂಗ ಪತ್ತೆ ಮಾಡಿಸಬಹುದಾದ ಗರ್ಭಿಣಿಯರನ್ನು ಗುರುತಿಸಬಹುದು. ಸಾಮಾನ್ಯವಾಗಿ ಮೊದಲನೇ ಹೆರಿಗೆಯವರು ಗಂಡಾಗಲಿ ಹೆಣ್ಣಾಗಲಿ ಮಕ್ಕಳು ಬೇಕು ಎಂಬ ಬಯಕೆಯನ್ನು ಹೊಂದಿರುತ್ತಾರೆ. ಎರಡನೇ ಮೂರನೇ ಗರ್ಭಧರಿಸಿರುವವರಲ್ಲಿ ಗಂಡು ಮಗು ಬೇಕು ಎಂಬ ಹಂಬಲವಿರುತ್ತದೆ. ಅಂತಹ ಅರ್ಹ ದಂಪತಿಗಳಿಗೆ ಸಮಾಲೋಚನೆ ಮೂಲಕ ಭ್ರೂಣ ಲಿಂಗ ಪತ್ತೆಯನ್ನು ಕೆಳಹಂತದಲ್ಲೇ ತಪ್ಪಿಸಬಹುದು ಎಂದು ತಿಳಿಸಿದರು.

ತಾಲ್ಲೂಕು ಆರೋಗ್ಯಾಧಿಕಾರಿ ಅಧಿಕಾರಿ ಡಾ. ರಾಘವೇಂದ್ರ ಪ್ರಸಾದ್ ಮಾತನಾಡಿ, ಲಿಂಗ ಪತ್ತೆ ಕಾಯ್ದೆಯ ಬಗ್ಗೆ ತಿಳಿಸಿ ಅಲ್ಟ್ರಾಸೌಂಡ್ ಸ್ಕ್ಯಾನ್ ಮಾಡಿಸುವಾಗ ಇರುವ ಎ ದಿಂದ ಎಫ್ ನಮೂನೆಗಳು ಸ್ಕ್ಯಾನ್ ಸೆಂಟರ್‌ನಲ್ಲಿ ನಿರ್ವಹಿಸಬೇಕಾದ ದಾಖಲಾತಿ, ವಿಧಿಸಬಹುದಾದ ದಂಡ ಮತ್ತು ಶಿಕ್ಷೆಗಳ ಬಗ್ಗೆ ತಿಳಿಸಿದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ವೀರೇಂದ್ರ ಪಾಟೀಲ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಹಾಗೂ ವಿಷಯ ನಿರ್ವಾಹಕ ಹೆಚ್.ಬಿ.ಪೂಜಾರ್, ಸ್ತ್ರೀ ರೋಗ ತಜ್ಞರು, ಆಶಾ ಕಾರ್ಯಕರ್ತೆಯರು, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳು ಇದ್ದರು.

ಖ್ಯಾತ ಕಾದಂಬರಿಕಾರ ಡಾ.ಬಿ.ಎಲ್.ವೇಣು ಬಿಚ್ಚುನುಡಿ

ಜನರ ಪ್ರೀತಿಗೆ ಎಂದೂ ಬೆಲೆ ಕಟ್ಟಲಾಗಲ್ಲ

» ಚಿತ್ರದುರ್ಗ

ಈ ನೆಲದ ಜನರು ತೋರುತ್ತೀರುವ ಅಭಿಮಾನ, ಪ್ರೀತಿಯನ್ನು ಎಂದೂ ಮರೆಯಲಾಗದು, ಅದಕ್ಕೆ ಬೆಲೆಯೂ ಕಟ್ಟಲಾಗದು ಎಂದು ನಾಡಿನ ಹಿರಿಯ ಕಾದಂಬರಿಕಾರ, ಲೇಖಕ ಡಾ.ಬಿ.ಎಲ್. ವೇಣು ನುಡಿದರು

ಪ್ರಾದೇಶಿಕ ಭಾಷಾ ಗುಣಾತ್ಮಕ ಚಲನ ಚಿತ್ರಗಳ ಆಯ್ಕೆ ಸಮಿತಿಗೆ ಅಧ್ಯಕ್ಷರಾಗಿ ಆಯ್ಕೆ ಹಾಗೂ ವಾಲ್ಮೀಕಿ ಗುರುಪೀಠದಿಂದ ನೀಡಲಾಗುತ್ತಿರುವ ಪ್ರತಿಷ್ಠಿತ ರಾಜವೀರ ಮದಕರಿ ನಾಯಕ ಪ್ರಶಸ್ತಿ ಪಡೆದಿರುವ ಹಿನ್ನಲೆಯಲ್ಲಿ ಬುಧವಾರ ಸೃಷ್ಟಿಸಾಗರ ಪ್ರಕಾಶನ ಮತ್ತು ಮದಕರಿ ಸಾಂಸ್ಕೃತಿಕ ಕೇಂದ್ರದ ಸಹಯೋಗದಲ್ಲಿ ವೇಣು ಅವರ ಅಭಿಮಾನಿಗಳು ನೀಡಿದ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು

ನಾನು ಯಾವ ಸನ್ಮಾನ, ಪ್ರಶಸ್ತಿಗಾಗಿ ಕೆಲಸ ಮಾಡುವವನಲ್ಲ. ಅದರ ಆಲೋಚನೆಯೂ ಇಲ್ಲ. ನನ್ನ ಕಾಯಕವನ್ನು ನಾನು ಶ್ರದ್ಧೆಯಿಂದ ಮಾಡುತ್ತಿದ್ದೇನೆ. ಇದುವರೆಗೂ ನಾನು ಮಾಡಿಕೊಂಡು ಬಂದಿರುವ ಕೆಲಸ, ಸಾಹಿತ್ಯ ಕೃಷಿ, ಸಾಧನೆಗೆ ಜನರು ಅತ್ಯಂತ ಪ್ರೀತಿ, ಅಭಿಮಾನ ತೋರಿದ್ದಾರೆ.ಅದಕ್ಕಿಂತ ಮಿಗಿಲಾದದ್ದು ಏನೂ ಇಲ್ಲ. ನನ್ನ ಬರವಣಿಗೆಗೆ, ಸಾಹಿತ್ಯ ಕೃಷಿಗೆ ಸಿಗಬೇಕಾದ ಎಲ್ಲಾ ಗೌರವ ಸಿಕ್ಕಿದೆ. ಸಾಧನೆಗೆ ಪ್ರತಿಫಲವೂ ಸಿಗುತ್ತಿದೆ ಎನ್ನುವುದು ಸಮಾಧಾನ ತಂದಿದೆ ಎಂದು ಹೇಳಿದರು

ನಾನು ಬಯಸದೆ ಬಂದ ಪ್ರಶಸ್ತಿಗಳು ಸಾಕಷ್ಟಿವೆ. ಅದರೊಟ್ಟಿಗೆ ವಾಲ್ಮೀಕಿ ಗುರುಪೀಠ ನೀಡುತ್ತಿರುವ ರಾಜವೀರ ಮದಕರಿ ನಾಯಕ ಪ್ರಶಸ್ತಿ ಎಲ್ಲಾ ಪ್ರಶಸ್ತಿ, ಗೌರವಕ್ಕಿಂತಲೂ ಮೌಲ್ಯವಾದದ್ದು ಎಂದು ನಾನು ಭಾವಿಸಿದ್ದೇನೆ. ನಾನು ಈ ನೆಲದ ಮಗ, ಈ ನೆಲದ ಚರಿತ್ರೆಯನ್ನು, ಐತಿಹಾಸಿಕ ಪ್ರಸಂಗಗಳನ್ನು, ಘಟನಾವಳಿಗಳನ್ನು ನನ್ನ ಬರಹಗಳ ಮೂಲಕ ಸಾಲು ಸಾಲಾಗಿ ಕಾದಂಬರಿ ಕೃತಿಯ ಮೂಲಕ ಅನಾವರಣಗೊಳಿಸಿದ್ದೇನೆ.

ಚಿತ್ರದುರ್ಗದ ಮದಕರಿ ನಾಯಕರ ಆಳ್ವಿಕೆ, ರಾಜಮಹಾರಾಜರು, ಇಲ್ಲಿನ ಚರಿತ್ರೆ, ಪರಾಕ್ರಮಗಳ ಕುರಿತಾಗಿ ಸಾಕಷ್ಟು ಬರೆದಿದ್ದೇನೆ. ವಿಶೇಷವಾಗಿ ರಾಜವೀರ ಮದಕರಿ ನಾಯಕರ ಕುರಿತು ಕಾದಂಬರಿ ಬರೆಯುವಾಗ ತರಾಸು ಮತ್ತು ತಮ್ಮ ನಡುವೆ ಎದುರಾದ ವೈರತ್ವದ ಹೊರತಾಗಿಯೂ ಬರವಣಿಗೆ ಮುಂದುವರೆಸಿದ್ದೆ. ನಾನು ಸ್ವಾಭಿಮಾನವಿಟ್ಟುಕೊಂಡು ಬಂದವನು. ದುರ್ಗದ ಚರಿತ್ರೆಯನ್ನು ಆಧರಿಸಿ ಬರೆದ ಅನೇಕ ಕೃತಿಗಳಿಗೆ ಜನಮನ್ನಣೆ ಸಿಕ್ಕಿದೆ. ಸಾಕಷ್ಟು

ಸಿನಿಮಾಗಳೂ ಆಗಿವೆ. ಈ ಎಲ್ಲಾ ಅಂಶಗಳನ್ನು ಪರಿಗಣಿಸಿ ವಾಲ್ಮೀಕಿ ಗುರುಪೀಠ ರಾಜವೀರ ಮದಕರಿ ನಾಯಕ ಪ್ರಶಸ್ತಿ ನೀಡಿರುವುದು ನನ್ನಗೆ ತುಂಬಾ ಸಂತಸ ತಂದುಕೊಟ್ಟಿದೆ ಎಂದು ಬಿ.ಎಲ್.ವೇಣು ಹೇಳಿದರು

ಚಿತ್ರದುರ್ಗದ ಜನರು ನನಗೆ ತೋರಿರುವ ಪ್ರೀತಿ, ಅಭಿಮಾನವನ್ನು ಯಾವತ್ತಿಗೂ ಮರೆಯಲಾರೆ. ಈ ದುರ್ಗದ ನೆಲದಲ್ಲಿಯೇ ನಾನು ಬದುಕಿರುವಾಗಲೇ ನನ್ನ ಹೆಸರಿನಲ್ಲಿ ಒಂದು ವೃತ್ತಕ್ಕೆ ನಾಮಕರಣ ಮಾಡಲಾಗಿದೆ. ಜೊತೆಗೆ ನಗರಸಭೆಯವತಿಯಿಂದ ದೊಡ್ಡ ಗೌರವ ಸಿಕ್ಕಿದೆ. ಇದು ಅಂದು ಅಧ್ಯಕ್ಷರಾಗಿದ್ದ ಬಿ.ಕಾಂತರಾಜು ಅವರು ನನ್ನ ಮೇಲೆ ಇಟ್ಟಿರುವ ಅಭಿಮಾನಕ್ಕೆ ಸಾಕ್ಷೀಕರಿಸುತ್ತಿದೆ ಎಂದು ಹೇಳಿದರು. ಮದಕರಿ ನಾಯಕ ವಿದ್ಯಾ ಸಂಸ್ಥೆಯ ಅಧ್ಯಕ್ಷ ಸಂದೀಪ್ ಮಾತನಾಡಿ, ಚಿತ್ರದುರ್ಗದ ಚರಿತ್ರೆಯನ್ನು ನಾಡಿನ ಜನರಿಗೆ ತಮ್ಮ ಬರಹಗಳ ಮೂಲಕ ಪ್ರಚುರ ಮಾಡುತ್ತಲೇ ಸಾಹಿತ್ಯ, ಸಿನಿಮಾ ರಂಗದಲ್ಲಿ ದೊಡ್ಡ ಸಾಧನೆ ಮಾಡಿರುವ ಬಿ.ಎಲ್.ವೇಣು ಅವರು ಈ ನೆಲದ ಆಸ್ತಿ. ಅವರ ಕೊಡುಗೆಯನ್ನು ಯಾರೂ ಮರೆಯಲಾಗದು ಎಂದು ಬಣ್ಣಿಸಿದರು. ನಗರ ಸಭೆ ಮಾಜಿ ಅಧ್ಯಕ್ಷ ಬಿ.ಕಾಂತರಾಜು ಮಾತನಾಡಿ, ಸಾಹಿತ್ಯ, ಕಾದಂಬರಿ ಮತ್ತು ಸಿನಿಮಾ ಲೋಕದಲ್ಲಿ ಅವರು ಮಾಡಿರುವ ಸಾಧನೆಯನ್ನು ಇಡೀ ನಾಡು ಮೆಚ್ಚಿದೆ. ಇದುವರೆಗೆ ಅವರಿಗೆ ಸಿಗಬೇಕಾಗಿರುವ ಎಲ್ಲಾ ಸ್ಥಾನ ಮಾನಗಳೂ ಸಿಕ್ಕಿವೆ, ಪ್ರಶಸ್ತಿಗಳೂ ಲಭಿಸಿವೆ. ಇನ್ನೂ ಯಾವುದಾದರೂ ಪ್ರಶಸ್ತಿ ಉಳಿದಿದ್ದರೆ ಅದರು ವೇಣು ಅವರಂತಹ ಮೇರು ವ್ಯಕ್ತಿತ್ವದ ಲೇಖಕರಿಗೆ ಸಿಕ್ಕೆರೆ ಆ ಪ್ರಶಸ್ತಿಗೆ ಗೌರವ ಹೆಚ್ಚುತ್ತದೆ ಎಂದರು

ವಿಜಯ ಸೇನೆ ಸಂಘಟನೆಯ ಜಿಲ್ಲಾದ್ಯಕ್ಷ ಕೆ.ಟಿ.ಶಿವಕುಮಾರ್ ಈಸಂದರ್ಭದಲ್ಲಿ ಮಾತನಾಡಿ, ಡಾ.ಬಿ.ಎಲ್.ವೇಣು ಅವರ ಬರಹಗಳು ಸಮಾಜ ಬದಲಾವಣೆಗೆ ಪೂರಕವಾಗಿವೆ. ಅನೇಕ ಶೋಷಿತರಿಗೆ ಅವರ ಬರಹಗಳು ದ್ವನಿ ನೀಡಿವೆ. ಹೋರಾಟಗಳಿಗೂ ಸ್ಫೂರ್ತಿ ನೀಡಿವೆ. ಇಂದಿಗೂ ಅನೇಕ ಚಳುವಳಿಗಾರರು, ಯುವಕರು, ಇನ್ನತರೆ ಸಾಮಾಜಿಕ ಕಾರ್ಯಕರ್ತರಿಗೆ ವೇಣು ಅವರ ಬರಹ, ಬದುಕು ಪ್ರೇರಣೆ ನೀಡಿವೆ. ಇಂತಹ ಲೇಖಕರಿಗೆ ಮುಂದಿನ ದಿನಗಳಲ್ಲಿ ಕರ್ನಾಟಕ ರತ್ನ ಪ್ರಶಸ್ತಿಯೂ ಸಿಗಬೇಕು ಎಂದು ಆಶಿಸಿದರು

ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಧರ್ಮದರ್ಶಿಗಳಾದ ಹರ್ತಿಕೋಟೆ ವೀರೇಂದ್ರ ಸಿಂಹ ಅವರ ಮಾತನಾಡಿ, ಡಾ.ಬಿ.ಎಲ್,ವೇಣು ಅವರ ಸಾಹಿತ್ಯ ಕ್ಷೇತ್ರದ ಸಾಧನೆ, ಸಿನಿಮಾ ರಂಗದಲ್ಲಿ ಅವರು ಮಾಡಿರುವ ಹೆಸರು ಯಾರೂ ಮರೆಯಲಾಗದು. ಅವರ ಅಪ್ರತಿಮ ಸಾಧನೆಯನ್ನು ಗುರ್ತಿಸಿ ಶ್ರೀಮಠ ಈ ಪ್ರಶಸ್ತಿ ನೀಡಿದೆ ಎಂದರುಸೃಷ್ಟಿಸಾಗರ ಪ್ರಕಾಶನ ಮುಖ್ಯಸ್ಥ ಹಾಗೂ ಲೇಖಕ ಮೇಘ ಗಂಗಾಧರ ನಾಯ್ಕ, ಮದಕರಿ ಸಾಂಸ್ಕೃತಿಕ ಕೇಂದ್ರದ ಮುಖ್ಯಸ್ಥ ಡಿ.ಗೋಪಾಲಸ್ವಾಮಿ ನಾಯಕ್, ಅಹೋಬಲ ಟಿವಿಎಸ್ ಶೋ ರೂಂ ಮಾಲೀಕ ಅರುಣ್, ಸಾಹಿತಿಗಳಾದ ಷರೀಫಾಭಿ, ಲಲಿತಾ ಕೃಷ್ಣಮೂರ್ತಿ, ಸೋಮಶೇಖರ್ ಹಾಜರಿದ್ದರು

ಫೆ.13 ರಿಂದ 28 ರವರೆಗೆ ದಕ್ಷಿಣ ಕಾಶಿ ಶ್ರೀ ತೇರುಮಲ್ಲೇಶ್ವರಸ್ವಾಮಿ ಜಾತ್ರಾ ಮಹೋತ್ಸವ

ತ

ಫಾಸ್ಟ್ ನ್ಯೂಸ್

ಹುಲಿಕುಂಟೆ ಆಂಜನೇಯ ಸ್ವಾಮಿ ದೇವಸ್ಥಾನದ ಜೀರ್ಣೋದ್ಧಾರಕ್ಕಾಗಿ ಎರಡು ಲಕ್ಷ ಡಿಡಿ ವಿತರಣೆ

» ಚಳ್ಳಕೆರೆ

ಗ್ರಾಮೀಣ ಭಾಗಗಳ ದೇವಸ್ಥಾನಗಳ ಅಭಿವೃದ್ಧಿಗಾಗಿ ಪೂಜ್ಯವೀರೇಂದ್ರ ಹೆಗ್ಗಡೆ ಮಾರ್ಗದರ್ಶನಲ್ಲಿ ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ವತಿಯಿಂದ ಸಹಾಯಧನವನ್ನು ನೀಡಲಾಗುತ್ತಿದ್ದು, ದೇವಸ್ಥಾನದ ಆಡಳಿತ ಮಂಡಳಿ ಸದ್ವಿನಿಯೋಗಪಡಿಸಿಕೊಳ್ಳಬೇಕೆಂದು ಯೋಜನಾಧಿಕಾರಿ ಶಶಿಕಲಾ ತಿಳಿಸಿದರು. ಅವರು, ಗುರುವಾರ ತಾಲ್ಲೂಕಿನ ಸಾಣೇಕೆರೆ ವಲಯ ವ್ಯಾಪ್ತಿಯ ಹುಲಿಕುಂಟೆ ಗ್ರಾಮದ ಶ್ರೀಆಂಜನೇಯಸ್ವಾಮಿ ದೇವಸ್ಥಾನದ ಅಭಿವೃದ್ಧಿಮಂಡಳಿ ನೀಡಿದ ಮನವಿಯನ್ನು ಆಧರಿಸಿ ಎರಡು ಲಕ್ಷ ಡಿಡಿಯನ್ನು ದೇವಸ್ಥಾನದ ಆಡಳಿತ ಮಂಡಳಿಗೆ ಹಸ್ತಾಂತರಿಸಿ ಮಾತನಾಡಿದರು. ದೇವಸ್ಥಾನ ಆಡಳಿತ ಮಂಡಳಿಯ ಪರವಾಗಿ ಡಿಡಿ ಸ್ವೀಕರಿಸಿ ಮಾತನಾಡಿದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ವತಿಯಿಂದ ದೇವಸ್ಥಾನದ ಅಭಿವೃದ್ಧಿಗೆ ಹಣ ಬಿಡುಗಡೆ ಮಾಡಿರುವುದು ಸಂತಸದ ವಿಷಯ. ಈ ಹಣವನ್ನು ಉತ್ತಮ ರೀತಿಯಲ್ಲಿ ಬಳಸಿಕೊಂಡು ದೇವಸ್ಥಾನವನ್ನು ಅಭಿವೃದ್ಧಿಪಡಿಸಿಲಾಗುವುದು ಎಂದು ತಿಳಿಸಿದರು. ವಲಯ ಮೇಲ್ವಿಚಾರಕ ಭರತ್ ಮೊದಲಾದವರು ಇದ್ದರು.

ಕಾರ್ಮಿಕರ ಭವಿಷ್ಯನಿಧಿ ಪಾವತಿಸದ ಉದ್ಯೋಗದಾತರಿಂದ ವಸೂಲಾತಿ ಆಂದೋಲನ

» ದಾವಣಗೆರೆ

ಕಾರ್ಮಿಕರ ಭವಿಷ್ಯನಿಧಿಗೆ ವಂತಿಗೆಯನ್ನು ಪಾವತಿಸದ ಸಂಸ್ಥೆ, ಉದ್ದಿಮೆಗಳಿಂದ ವಿಶೇಷ ವಸೂಲಾತಿ ಆಂದೋಲನ ಕೈಗೊಳ್ಳಲಾಗಿದೆ. ಐದು ಲಕ್ಷಕ್ಕಿಂತ ಹೆಚ್ಚು ಬಾಕಿ ಉಳಿಸಿಕೊಂಡಿರುವ ಸಂಸ್ಥೆ, ಉದ್ದಿಮೆಗಳಿಂದ ವಸೂಲಾತಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ಶಿವಮೊಗ್ಗ ಪ್ರಾದೇಶಿಕ ಕಚೇರಿ ವ್ಯಾಪ್ತಿಯಲ್ಲಿ ಬರುವ ದಾವಣಗೆರೆ ಜಿಲ್ಲೆಯಲ್ಲಿನ ಬಿಕೆಆರ್ ಸ್ವಾಮಿ ಸೆಕ್ಯೂರಿಟಿ ಸರ್ವೀಸ್, ಎಂ.ಸಿ.ಸಿ.ಬಿ.ಬ್ಲಾಕ್, 6 ನೇ ಮುಖ್ಯ ರಸ್ತೆಯ 2 ನೇ ಕ್ರಾಸ್,ದಾವಣಗೆರೆಈಸಂಸ್ಥೆಯುರೂ.1,14,48,493 ರೂ.ಗಳ ಬಾಕಿ ಉಳಿಸಿಕೊಂಡಿದೆ. ಹರಿಹರದ ಸೋನ್ಲಕರ್ ಟೂಲ್ ವರ್ಕ್ಸ್ ಪ್ರೈ.ಲಿ, ಹರಿಹರ ಇವರು ರೂ.54,84,159 ಬಾಕಿ ಪಾವತಿಸಬೇಕು. ದಾವಣಗೆರೆ ಕೆ.ಆರ್.ರಸ್ತೆಯಲ್ಲಿನ ಅಲ್ತಾಫ್ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಇವರು ರೂ.9,56,859 ಗಳನ್ನು ಮತ್ತು ಹರಪನಹಳ್ಳಿಯ ಕಾಟ್ರಾ ಪೊಟೋಶಿಯಂ ಪ್ರೈ.ಲಿ ಇವರು ರೂ.50 ಲಕ್ಷ ಕಾರ್ಮಿಕರ ಭವಿಷ್ಯನಿಧಿ ವಂತಿಗೆಯನ್ನು ಪಾವತಿಸದೇ ಬಾಕಿ ಉಳಿಸಿಕೊಂಡಿರುತ್ತಾರೆ. ಈ ಸಂಸ್ಥೆ, ಉದ್ಯೋಗದಾತರು, ನಿರ್ದೇಶಕರು ಆಸ್ತಿಗೆ ಸಂಬಂಧಿಸಿದ ಯಾವುದೇ ಮಾಹಿತಿ ಇದ್ದಲ್ಲಿ ಅದನ್ನು ro.shivamogga@epfindia.gov.inನಲ್ಲಿ ಹಂಚಿಕೊಳ್ಳಬಹುದಾಗಿದೆ. ಬಾಕಿಯ ವಸೂಲಾತಿಗೆ ಬಲವಂತದ ಕ್ರಮಗಳನ್ನು ಕೈಗೊಳ್ಳುವ ಮೊದಲು ಉದ್ಯೋಗದಾತರು ತಮ್ಮ ಭವಿಷ್ಯನಿಧಿ ಕೊಡುಗೆಗಳನ್ನು ಸಕಾಲದಲ್ಲಿ ಪಾವತಿಸಲು ಶಿವಮೊಗ್ಗ ಪ್ರಾದೇಶಿಕ ಕಚೇರಿ ವಸೂಲಾತಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಭಾರತೀಯ ಸಂಜ್ಞಿಭಾಷೆ ತರಬೇತಿ ಕುರಿತು ಕಾರ್ಯಗಾರ

» ದಾವಣಗೆರೆ

ಜಿಲ್ಲಾಡಳಿತ, ಮಹಾನಗರ ಪಾಲಿಕೆ, ಜಿಲ್ಲಾ ಕಿವುಡರ ಸಂಘ ದಾವಣಗೆರೆ ಇವರುಗಳ ವತಿಯಿಂದ ಫೆ. 12 ಮತ್ತು 13 ರಂದು ಬೆಳಗ್ಗೆ 11 ಗಂಟೆಗೆ ನಗರದ ಸಿ.ಆರ್.ಸಿ.ಕೇಂದ್ರಆವರಣದಲ್ಲಿರುವವಿಕಲಚೇತನರ ಕೌಶಲ್ಯ ಭವನದಲ್ಲಿ ಮಹಾನಗರ ಪಾಲಿಕೆ ಮತ್ತು ವಿವಿಧ ಇಲಾಖೆ ಅಧಿಕಾರಿಗಳಿಗೆ ವಿವಿಧ ಸಂಘ ಸಂಸ್ಥೆಗಳ ಸದಸ್ಯರು, ಪೋಷಕರಿಗೆ ಭಾರತೀಯ ಸಂಜ್ಞಿಭಾಷೆ ತರಬೇತಿ ಕುರಿತು ಎರಡು ದಿನಗಳ ಕಾರ್ಯಗಾರವನ್ನು ಆಯೋಜಿಸಲಾಗಿದೆ.

ಕಾರ್ಯಗಾರವನ್ನು ಜಿಲ್ಲಾಧಿಕಾರಿ ಡಾ ಎಂ.ವಿ.ವೆಂಕಟೇಶ್ ಉದ್ಘಾಟಿಸುವರು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ. ಇಟ್ನಾಳ್ ಅಧ್ಯಕ್ಷತೆಯನ್ನು ವಹಿಸುವರು.

ಮುಖ್ಯ ಅತಿಥಿಗಳಾಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ. ಮ.ಕರೆಣ್ಣವರ ಮಹಾನಗರ ಪಾಲಿಕೆ ಆಯುಕ್ತರಾದ ರೇಣುಕ, ಸಿ.ಆರ್.ಸಿ.ಕೇಂದ್ರ ನಿರ್ದೇಶಕರಾದ ಮೀನಾಕ್ಷಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿಗಳಾದ ಕೆ.ಕೆ ಪ್ರಕಾಶ್, ಜಿಲ್ಲಾ ಕಿವುಡ ಸಂಘದ ಅಧ್ಯಕ್ಷರಾದ ಅಸೀಫ್.ಎ. ಭಾಗವಹಿಸುವರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಬಿ.ಆನಂದ್

ಸಣ್ಣ ಪ್ರಮಾಣದ ಉದ್ಯಮಗಳಿಂದ ಉದ್ಯೋಗ ಸೃಷ್ಟಿ

» ಚಿತ್ರದುರ್ಗ

ಸಣ್ಣ ಸಣ್ಣ ಪ್ರಮಾಣದ ಉದ್ಯಮಗಳಿಂದ ಉದ್ಯೋಗ ಸೃಷ್ಟಿಯಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಬಿ.ಆನಂದ್ ತಿಳಿಸಿದರು.

ನಗರದ ಜಿಲ್ಲಾ ಕೈಗಾರಿಕಾ ಕೇಂದ್ರದ ಸಭಾಂಗಣದಲ್ಲಿ ಬುಧವಾರ ಸಮಾಜ ಕಲ್ಯಾಣ ಇಲಾಖೆ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್) ಮತ್ತು ಜಿಲ್ಲಾ ಕೈಗಾರಿಕೆ ಕೇಂದ್ರ ಇವರ ಸಂಯುಕ್ತಾಶ್ರಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಯುವ ಜನರಿಗೆ ಹತ್ತು ದಿನಗಳ ಉದ್ಯಮಶೀಲತಾಭಿವೃದ್ಧಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಸಣ್ಣ ಸಣ್ಣ ಪ್ರಮಾಣದ ಉದ್ಯಮಗಳಿಂದ ಉದ್ಯೋಗ ಸೃಷ್ಟಿಯಾಗಿದೆ ಎಂದು ತಿಳಿಸಿದ ಅವರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಜಿಲ್ಲಾ ಕೈಗಾರಿಕೆ ಕೇಂದ್ರದಲ್ಲಿ ಇರುವ ಯೋಜನೆಗಳ ಬಗ್ಗೆ ತಿಳಿಸಿದರು. ಸಿಡಾಕ್ ಸಂಸ್ಥೆಯು ಉದ್ಯಮಶೀಲತೆ ಕಾರ್ಯಕ್ರಮಗಳನ್ನು ನಿರಂತರವಾಗಿ ಸಂಘಟಿಸುತ್ತಿರುವುದಕ್ಕೆ ಅಭಿನಂದನೆ ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಮಾತನಾಡಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳ ಅಭಿವೃದ್ಧಿಗಾಗಿ ಸಮಾಜ ಕಲ್ಯಾಣ ಇಲಾಖೆ ಇರುವಂತದ್ದು. ಆದುದರಿಂದ ಎಲ್ಲಾ ಶಿಬಿರಾರ್ಥಿಗಳು ಆಸಕ್ತಿಯಿಂದ ಭಾಗವಹಿಸಿ ತರಬೇತಿಯ ಪ್ರಯೋಜನ ಪಡೆದುಕೊಂಡು ತಮ್ಮ ಸುತ್ತಮುತ್ತಲಿರುವವರೆಗೂ ಉದ್ಯೋಗ ವನ್ನು ನೀವು ನೀಡುವಂತೆ ಅಗಲಿ ಎಂದು ತಿಳಿಸಿದ ಅವರು, ಶಿಬಿರಾರ್ಥಿಗಳು ಯಶಸ್ವಿ ಉದ್ಯಮಿಗಳಾಗುವಂತೆ ಶುಭ ಹಾರೈಸಿದರು. ಸಿಡಾಕ್ ಸಂಸ್ಥೆಯ ಜಂಟಿ ನಿರ್ದೇಶಕ ಆರ್.ಪಿ.ಪಾಟೀಲ್ ಮಾತನಾಡಿ, ಕರ್ನಾಟಕ ರಾಜ್ಯದಾದ್ಯಂತ ಉದ್ಯಮಶೀಲತೆಯನ್ನು ಅಭಿವೃದ್ಧಿಪಡಿಸಲು ಸರ್ಕಾರದಿಂದ ಸ್ಥಾಪಿವಾಗಿರುವ ಸಿಡಾಕ್ (ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ), ಸಂಸ್ಥೆಯು ಉದ್ಯಮಶೀಲತೆಯು ಹುಟ್ಟಿನಿಂದ ಮಾತ್ರ ಬರಬೇಕಾಗಿಲ್ಲ, ತರಬೇತಿಯ ಮೂಲಕ ಸಾಮಾನ್ಯ ಜನರಲ್ಲೂ ಉದ್ಯಮಶೀಲತೆಯನ್ನು ಉದ್ದೀಪನೆಗೊಳಿಸಬಹುದು ಎಂಬ ತತ್ವದೊಂದಿಗೆ ಕಾರ್ಯನಿರ್ವಹಿಸುತ್ತಿದೆ. ಭಾರತ ದೇಶದಲ್ಲಿ ನಿರುದ್ಯೋಗ ಸಮಸ್ಯೆ ನಿವಾರಣೆಗಾಗಿ (ಇಂದಿನ ಯುವಜನತೆ ಸ್ವಯಂ ಉದ್ಯಮವನ್ನು ಸ್ಥಾಪಿಸಲು) ಸ್ವಯಂ ಉದ್ಯಮ ಸ್ಥಾಪನೆ ಪರಿಹಾರವಾಗಬಹುದೆಂದು ಸರ್ಕಾರ ಈ ತರಹದ ತರಬೇತಿ ಕಾರ್ಯಕ್ರಮಗಳನ್ನು ಪ್ರಾಯೋಜಿಸುತ್ತದೆ ಎಂದರು.

ಹತ್ತು ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮದಲ್ಲಿ ಪರಿಣಿತ ಅತಿಥಿ ಭೋದಕರುಗಳಿಂದ ಶಿಬಿರಾರ್ಥಿಗಳಿಗೆ ಉದ್ಯಮಶೀಲರ ಗುಣಲಕ್ಷಣಗಳು, ಸಾಮಾನ್ಯ ವ್ಯಕ್ತಿಯಿಂದ ಉದ್ಯಮಶೀಲ ವ್ಯಕ್ತಿಯಾಗಿ ಪರಿವರ್ತನೆಯಾಗಲು ಸಾಧನಾ ಪ್ರೇರಣ ತರಬೇತಿ, ಉದ್ಯಮ ಸ್ಥಾಪಿಸಲು ಅನುಸರಿಸಬೇಕಾದ ಮಜಲುಗಳು, ಉದ್ಯಮಾವಕಾಶಗಳ ಮಾಹಿತಿ, ಉದ್ಯಮ ಆಯ್ಕೆಯ ವಿಧಾನ, ಹಣಕಾಸು ನಿರ್ವಹಣೆ, ಮಾರುಕಟ್ಟೆ ನಿರ್ವಹಣೆ, ಲೆಕ್ಕಪತ್ರ ನಿರ್ವಹಣೆ, ಸಣ್ಣ ಉದ್ಯಮ ನಿರ್ವಹಣೆ ಇರುವ ಉದ್ಯಮಾವಕಾಶಗಳ ಮಾಹಿತಿ, ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸ್ವಯಂ ಉದ್ಯಮ ಸ್ಥಾಪಿಸಲು ಸಹಕರಿಸುವ ಯೋಜನೆಗಳ ಮಾಹಿತಿ, ಸಮರ್ಪಕ ಮಾಹಿತಿಗಾಗಿ ಸಂಪರ್ಕಿಸಬೇಕಾದ ಇಲಾಖೆಗಳ ಮಾಹಿತಿ ನೀಡುವರು ಎಂದು ತಿಳಿಸಿದರು.

ತರಬೇತಿಯಲ್ಲಿ ಆಸಕ್ತಿಯಿಂದ ಭಾಗವಹಿಸಿ ಸದುಪಯೋಗ ಪಡಿಸಿಕೊಳ್ಳಿ ಎಂದು ತಿಳಿಸುತ್ತಾ ನಿಮ್ಮ ಜೀವನದಲ್ಲಿ ಕಂಡ ಕನಸುಗಳು ನನಸಾಗಲಿ, ನೀವು ಯಶಸ್ವಿ ಉದ್ಯಮಶೀಲರಾಗಿ, ಆರ್ಥಿಕವಾಗಿ ಸಬಲರಾಗಿ ರಾಷ್ಟ್ರದ ಆರ್ಥಿಕತೆಗೆ ಕೊಡುವಂತಾಗಲಿ ಎಂದು ಹಾರೈಸಿದರು.

ಸಂಪನ್ಮೂಲ ವ್ಯಕ್ತಿ ಮುಕುಂದಪ್ಪ ಅವರು ತರಬೇತಿ ನೀಡಿದರು. ಶಿಬಿರಾರ್ಥಿಗಳಾದ ಕಾವ್ಯ ಪ್ರಾರ್ಥಿಸಿದರು. ಸೌಜನ್ಯ ಸ್ವಾಗತಿಸಿದರು. ಸುರೇಶ್ ಕುಮಾರ್ ವಂದಿಸಿದರು. ಹಾವೇರಿಯ ಸಿಡಾಕ್ ತರಬೇತುದಾರ ಶಿವಾನಂದ ತಳವಾರ್ ಇದ್ದರು.

ಪರಶುರಾಂಪುರ: ವಿವಿಧೆಡೆ ಸಂವಿಧಾನ ಜಾಗೃತಿ ರಥ

» ಪರಶುರಾಂಪುರ

ಸಂವಿಧಾನದ ಪೀಠಿಕೆಯ ಮಹತ್ವದ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ 'ಸಂವಿಧಾನ ಜಾಗೃತಿ ಜಾಥಾ'ದ ರಥವನ್ನು ಕುಂಭಮೇಳದೊಂದಿಗೆ ಅದ್ದೂರಿಯಾಗಿ ಪರಶುರಾಂಪುರದಲ್ಲಿ ಬುಧವಾರ ಸ್ವಾಗತಿಸಿದರು.

ಪರಶುರಾಂಪುರದಲ್ಲಿ ಬುದ್ಧ, ಬಸವ, ಅಂಬೇಡ್ಕರ್, ಮದಕರಿನಾಯಕ, ಕಲ್ಲಿನ ಕೋಟೆಯ ಚಿತ್ರ ಸಂವಿಧಾನದ ಪೀಠಿಕೆಯ ಮಹತ್ವ ಸಾರುವಂತಹ ಅಂಶಗಳನ್ನು ಒಳಗೊಂಡಿರುವ ಸ್ಥಬ್ದಚಿತ್ರದ ಮೆರವಣಿಗೆಗೆ ಗ್ರಾಪಂ ಅಧ್ಯಕ್ಷ ಜಗಲೂರು ಸ್ವಾಮಿ ಮೆರವಣಿಗೆಗೆ ಚಾಲನೆ ಮಾತನಾಡಿ,

'ಸಂವಿಧಾನದ ಬಗ್ಗೆ ಅರಿವು, ಸಾಮಾಜಿಕ ನ್ಯಾಯ, ಅಂಬೇಡ್ಕರ್ ಪರಿಕಲ್ಪನೆ' ಸೇರಿದಂತೆ ವಿವಿಧ ವಿಷಯಗಳ ಬಗ್ಗೆ ಉದ್ದೇಶಿಸಿ ಮಾಹಿತಿ ತಿಳಿಸಿದರು.ಗ್ರಾಮದ ಪ್ರಮುಖ ಬೀದಿಗಳಲ್ಲಿ ಬೈಕ್ ಜಾಥಾ ಮತ್ತು ವಿವಿಧ ಶಾಲಾ ಮಕ್ಕಳಿಂದ ಬೃಹತ್ ಮೆರವಣಿಗೆ ನಡೆಯಿತು.ಈ ವೇಳೆಯಲ್ಲಿ ಗ್ರಾಮದ ಮುಖ್ಯ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿದ ವೇಳೆಯಲ್ಲಿ ಪಿಡಿಒ ಗುಂಡಪ್ಪ ಸಂವಿಧಾನದ ಪ್ರಸ್ತಾವನೆಯ ಪ್ರತಿಜ್ಞಾ ವಿಧಿಯನ್ನು ಭೋದಿಸಿದರು.

ಗ್ರಾಪಂ ಅಧ್ಯಕ್ಷ ಜಗಲೂರು ಸ್ವಾಮಿ, ಪಿಡಿಒ ಗುಂಡಪ್ಪ, ರುದ್ರೇಶ್, ನಾಗಭೂಷಣ್,ಲಾಯರ್ ಪ್ರಕಾಶ್,ಓಬಳೇಶ್,ಅನಿತಾ, ಪ್ರಸನ್ನಕುಮಾರ್, ಮಿಲ್ಟಿ ಸಿದ್ದೇಶ್,ಜಯಣ್ಣ, ವೆಂಕಟೇಶ,ರಾಮಣ್ಣ ,ರವಿ,ರಮೇಶ, ಕರಿಯಣ್ಣ,ಬಜ್ಜಪ್ಪ ಸೇರಿದಂತೆ ಸಮಾಜ ಕಲ್ಯಾಣ ಇಲಾಖೆಯ ಮಂಜಪ್ಪ, ಆಲಿಜಾನ್ ಸೇರಿದಂತೆ ಇನ್ನಿತರರೆ ಅಧಿಕಾರಿಗಳ ಜತೆ ಗ್ರಾಪಂ ಸದಸ್ಯರು ಹಾಗೂ ಸಿಬ್ಬಂದಿ ಇದ್ದರು.

ದೊಡ್ಡಚೆಲ್ಲೂರು – ಗ್ರಾಪಂಯಲ್ಲಿ ಸಂವಿಧಾನದ ಜಾಗೃತಿ ರಥವನ್ನ ಶಾಲಾ ಮಕ್ಕಳ ಜತೆ ಗ್ರಾಮಸ್ಥರು ಪೂರ್ಣಕುಂಭದ ಮೂಲಕ ಸ್ವಾಗತಿಸಿದರು.ಈ ವೇಳೆ ಗ್ರಾಪಂ ಅಧ್ಯಕ್ಷ ಈರಣ್ಣ,ಉಪಧ್ಯಕ್ಷೆ ಪಲ್ಲವಿ,ಪಿಡಿಒ ದೇವರಾಜು,ಮುಖ್ಯ ಶಿಕ್ಷಕರಾದ ಹನಮಂತಪ್ಪ,ಡಿ.ಟಿ ಹನಮಂತರಾಯ,ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಗಳ ಜತೆ ಸಾಮಾಜಿಕ ಹೋರಾಟಗಾರರು, ಸ್ವಯಂ ಸೇವಾ ಸಂಘಟನೆಗಳು, ಸ್ಥಳೀಯ ಸಂಘ ಸಂಸ್ಥೆಗಳು, ಒಕ್ಕೂಟಗಳ ಸದಸ್ಯರು, ಮುಖಂಡರ ಜೊತೆ ಶಿಕ್ಷಕರು,ವಿದ್ಯಾರ್ಥಿಗಳು ಉಪಸ್ಥಿತರಿದದ್ದರು.

ಸ್ಥಬ್ದಚಿತ್ರದಲ್ಲಿ ಭಾರತದ ಸಂವಿಧಾನದ ಪ್ರತಿಯ ಚಿತ್ರ, ಎಲ್.ಇ.ಡಿ. ಪರದೆ, ಸಂವಿಧಾನದ ಪ್ರಸ್ತಾವನೆಯ ಚಿತ್ರ, ಡಾ.ಬಿ.ಆರ್. ಅಂಬೇಡ್ಕರ್, ಬುದ್ಧ ಹಾಗೂ ಬಸವಣ್ಣ , ಮದಕರಿನಾಯಕ, ಕಲ್ಲಿನ ಕೋಟೆ ಸೇರಿದಂತೆ ಇನ್ನಿತರರೆ ಭಾವಚಿತ್ರಗಳು ಕಂಡವು. ರಾಜ್ಯ ಕಾಂಗ್ರೆಸ್ ಸರ್ಕಾರದ 5 ಗ್ಯಾರಂಟಿ ಯೋಜನೆಗಳ ಪ್ರಚಾರ, ಸಂವಿಧಾನದ ಮಹತ್ವ ಸಾರುವ ಸಾಲುಗಳೂ ಗಮನ ಸೆಳೆಯಲಿವೆ. ಸಮಾಜ ಕಲ್ಯಾಣ ಇಲಾಖೆಯ ಬಗ್ಗೆಯೂ ಮಾಹಿತಿ ಒಳಗೊಂಡಿರುವುದು ಗಮನ ಸೆಳೆಯಿತು.

ಡಾ. ತಿಪ್ಪೇರುದ್ರ ಸಂಡೂರುರವರ 'ನುಡಿಸೌರಭ' ಕೃತಿಗೆ ಆಜೂರ ಪ್ರಶಸ್ತಿ.

» ಪರಶುರಾಂಪುರ

ಗ್ರಾಮದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ತಿಪ್ಪೇರುದ್ರ ಸಂಡೂರು ಇವರ 'ನುಡಿಸೌರಭ' ಲೇಖನ ಸಂಕಲನವು ಬೆಳಗಾವಿ ಜಿಲ್ಲೆಯ ರಾಯಬಾಗ ತಾಲೂಕಿನ ಹಾರೋಗೇರಿಯ ಆಜೂರ ಪ್ರತಿಷ್ಠಾನವು ನೀಡುವ ರಾಜ್ಯಮಟ್ಟದ ಆಜೂರ ಪ್ರಶಸ್ತಿಗೆ ಆಯ್ಕೆಯಾಗಿದೆ.ಮೂಲತಃ ಬಳ್ಳಾರಿ ಜಿಲ್ಲೆಯ ಸಂಡೂರಿನವರಾದ ಡಾ. ತಿಪ್ಪೇರುದ್ರ ಸಂಡೂರು ಇವರು ಸಾಹಿತ್ಯ ಸುರಭಿ, ಅರಿವಿನ ಪೈರು, ಕನ್ನಡ ಹಣತೆ, ಒಕ್ಕಲಿಗ ಮುದ್ದಣ್ಣ, ಕನ್ನಡ ಸಾಹಿತ್ಯ ಪರಿಷತ್ತಿನ ಕನ್ನಡ ನಿಘಂಟು–ಒಂದು ಅಧ್ಯಯನ ಸೇರಿದಂತೆ ಒಂಬತ್ತು ಪುಸ್ತಕಗಳನ್ನು ರಚಿಸಿದ್ದಾರೆ. ಫೆಬ್ರವರಿ 7ರಂದು ರಾಯಬಾಗ ತಾಲೂಕಿನ ಹಾರೋಗೇರಿಯಲ್ಲಿ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಇವರಿಗೆ ವೇದಿಕೆಯಲ್ಲಿ ನಗದು ಪುರಸ್ಕಾರ, ಸ್ಮರಣಿಕೆ ನೀಡಿ ಸನ್ಮಾನಿಸಲಾಗಿದೆ.

ಹೊನ್ನಾಳಿ ತಾ; ಕುಂಬಳೂರಿನಲ್ಲಿ ಸಂವಿಧಾನ ಜಾಗೃತಿ ಜಾಥಾ

» ದಾವಣಗೆರೆ

ದೇಶದ ಸಂವಿಧಾನ ಜಾರಿಯಾಗಿ ಅಮೃತ ವರ್ಷದಲ್ಲಿ ಸಾಗುತ್ತಿದ್ದು ಸಂವಿಧಾನದ ಆಶಯಗಳನ್ನು ಜನಸಾಮಾನ್ಯರಿಗೂ ತಲುಪಿಸುವ ಉದ್ದೇಶದಿಂದ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನಗಳಲ್ಲಿ ಹಮ್ಮಿಕೊಳ್ಳಲಾಗಿದೆ.

ಫೆಬ್ರವರಿ 8 ರಂದು ಹೊನ್ನಾಳಿ ತಾಲ್ಲೂಕಿನ ಕುಂಬಳೂರು ಗ್ರಾಮ ಪಂಚಾಯಿತಿ ಕೇಂದ್ರಸ್ಥಾನಕ್ಕೆ ಸಂವಿಧಾನ ಜಾಗೃತಿ ಜಾಥಾ ಬಂದಾಗ ಡಾ; ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ಗ್ರಾಮದಲ್ಲಿನ ಪ್ರೌಢಶಾಲಾ ವಿದ್ಯಾರ್ಥಿಗಳು ಭಾಗವಹಿಸಿ ಸಂವಿಧಾನ ಪೀಠಿಕೆಯನ್ನು ಓದಿ ಪ್ರತಿಜ್ಞಾವಿಧಿ ಸ್ವೀಕರಿಸಿದರು.

ಫೆಬ್ರವರಿ 9 ರಂದು ಜಾಥಾವು ದಾವಣಗೆರೆ ತಾ; ಶ್ಯಾಗಲೆ, ಮತ್ತಿ, ಚನ್ನಗಿರಿ ತಾ; ತ್ಯಾವಣಿಗೆ, ದಾವಣಗೆರೆ ತಾ; ನಲ್ಕುದುರೆ, ಚನ್ನಗಿರಿ ತಾ; ಕೆಂಪನಹಳ್ಳಿ, ನವಿಲೆಹಾಳ್, ಕರಿಕಟ್ಟೆ ಯಲ್ಲಿ ಸಂಚರಿಸಲಿದೆ. ಫೆ.10 ರಂದು ಚನ್ನಗಿರಿ ತಾ; ಕಬ್ಬಳ, ಬೆಳಲಗೆರೆ, ಚಿರಡೋಣಿ, ಕಂಸಸಾಗರ, ಕಣಿವೆಬಿಳಚಿ, ಕೆರೆಬಿಳಚಿ ಹಾಗೂ ರುದ್ರಾಪುರದಲ್ಲಿ ಸಂಚರಿಸಲಿದೆ.

ಪ್ರಮುಖ ಸುದ್ದಿ

ದೇವರ ಎತ್ತುಗಳ ಸಂಕಷ್ಟಕ್ಕೆ ನಿರಂತರ ನೆರವಾಗುತ್ತಿರುವ ಸುಧಾಮೂರ್ತಿ ಟ್ರಸ್ಟ್

290 ಟನ್ ಮೇವು ವಿತರಿಸಿದದ ಹೆಗ್ಗಳಿಕೆ ಜಪಾನಂದಶ್ರೀ

» ಚಳ್ಳಕೆರೆ

ತಾಲ್ಲೂಕಿನ ದೇವರ ಎತ್ತುಗಳೂ ಸೇರಿದಂತೆ ಬಹುತೇಕ

ಫಾಸ್ಟ್ ನ್ಯೂಸ್

ಡಿಪ್ಲೊಮಾ, ಐಟಿಐ ಪಾಸಾದವರ ಅಪ್ರೆಂಟಿಸ್ ಮೇಳ

» ದಾವಣಗೆರೆ

ಹರಿಹರದ ಎಪಿಎಂಸಿ ಬಳಿ ಇರುವ ಸರ್ಕಾರಿ ಕೈಗಾರಿಕಾತರಬೇತಿಸಂಸ್ಥೆಆವರಣದಲ್ಲಿಡಿಪ್ಲೊಮಾ, ಐಟಿಐ ಪಾಸಾದವರಿಗೆ ಏರ್ಪಡಿಸಲಾದ ಜಿಲ್ಲಾ ಮಟ್ಟದ ರಾಷ್ಟ್ರೀಯ ಅಪ್ರೆಂಟಿಸ್ ಮೇಳವನ್ನು ಫೆಬ್ರವರಿ 19 ಕ್ಕೆ ಮುಂದೂಡಲಾಗಿದೆ. ಈ ಶಿಶಿಕ್ಷು ಮೇಳದಲ್ಲಿ ಜಿಲ್ಲೆಯ ಐ.ಟಿ.ಐ, ಡಿಪ್ಲೋಮಾ ಪಾಸ್ ಆದ ನಿರುದ್ಯೋಗಿ ಯುವಕ, ಯುವತಿಯರು ಹಾಗೂ ಅಂತಿಮ ವರ್ಷದ ವಿದ್ಯಾರ್ಥಿಗಳು ಸಹ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ಮೊ. 9480085001, 9945049894, 9743104863 ಸಂಪರ್ಕಿಸಲು ಸ.ಕೈ.ತ.ಸಂಸ್ಥೆ ಪ್ರಾಂಶುಪಾಲರಾದ ಜಯಪ್ಪ ಎಂ. ತಿಳಿಸಿದ್ದಾರೆ.

ಶೆಲ್ ಬಂಕ್‌ನಲ್ಲಿ 45 ಕ್ಕೂ ಹೆಚ್ಚು ಕೂಪನ್ ಕಲೆಕ್ಟ್ ಮಾಡಿದ ದ್ವಿಚಕ್ರ ಹಾಗೂ ಕಾರಿನವರಿಗೆ ಗಿಫ್ಟ್

» ಚಿತ್ರದುರ್ಗ

ಚಳ್ಳಕೆರೆ ರಸ್ತೆ ಶ್ರೀರಾಮ ಕಲ್ಯಾಣ ಮಂಟಪದ ಸಮೀಪವಿರುವ ಶೆಲ್ ವಿ–ಪವರ್ ಪೆಟ್ರೋಲ್–ಡೀಸೆಲ್ ಹಾಕಿಸಿಕೊಂಡು 45 ಕ್ಕಿಂತಲೂ ಹೆಚ್ಚು ಕೂಪನ್‌ಗಳನ್ನು ಕಲೆಕ್ಟ್ ಮಾಡಿದವರಿಗೆ ಗಿಫ್ಟ್‌ಗಳನ್ನು ನೀಡಿ ಪ್ರೋತ್ಸಾಹಿಸಲಾಯಿತು.ಶೆಲ್ ವಿ–ಪವರ್‌ನ ಮ್ಯಾನೇಜರ್ ಸತ್ಯ ಮಾತನಾಡಿ ನಮ್ಮ ಪ್ರಾಡಕ್ಟ್‌ಗಳು ಎಲ್ಲಾ ಗ್ರಾಹರಿಗೂ ತಲುಪಿ ಉತ್ತಮ ಸೇವೆ ಲಭಿಸಲಿ ಎನ್ನುವುದು ನಮ್ಮ ಉದ್ದೇಶ. ವಿ–ಪವರ್ ದ್ವಿಚಕ್ರ ವಾಹನ ಹಾಗೂ ನಾಲ್ಕು ಚಕ್ರದ ವಾಹನಳಿಗೆ ಇಲ್ಲಿ ಇಂಧನ ಹಾಕಿಸಿಕೊಂಡಾಗ ಇಂಜಿನ್‌ನಲ್ಲಿನ ಕಾರ್ಬನ್ ಹೊರತೆಗೆಯುವುದು ವಿ–ಪವರ್‌ನ ವಿಶೇಷತೆ. ಇಂಡಿಯಾದಲ್ಲಿ ಇದು ಐದನೆ ಸ್ಥಾನದಲ್ಲಿರುವುದು ಮತ್ತೊಂದು ವಿಶೇಷತೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.ಶೆಲ್ ವಿ–ಪವರ್ ಪೆಟ್ರೋಲ್ ಬಂಕ್‌ನ ನಿಶಾಂತ್ ಮಾತನಾಡುತ್ತ ಶೆಲ್ ವಿ–ಪವರ್‌ನಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಹಾಕಿಸಿಕೊಂಡು ವಾಹನವನ್ನು ಚಲಾಯಿಸಿದಾಗ ಇಂಜಿನ್ ಸ್ಮೂತ್ ಆಗುವುದರ ಜೊತೆ ಮೈಲೇಜ್ ಕೂಡ ಅಧಿಕವಾಗಲಿದೆ ಎನ್ನುವುದು ವೈಜ್ಞಾನಿಕವಾಗಿ ಸಾಬೀತಾಗಿದೆ. ಅಂತರಾಷ್ಟ್ರ ಮಟ್ಟದಿಂದ ಘುಯಲ್ ಬರುತ್ತದೆ. ಫ್ರೀ ಆಯಿಲ್ ಸರ್ವಿಸ್ ಮಾಡಿಕೊಡಲಾಗುತ್ತದೆ. ಇ.ವಿ. ಚಾರ್ಜಿಂಗ್ ಸ್ಟೇಷನ್ ಆರಂಭಿಸುವ ಚಿಂತನೆಯಿದೆ. ಇದಕ್ಕೆ ಗ್ರಾಹಕರ ಸಹಕಾರ ಮುಖ್ಯ ಎಂದು ಕೋರಿದರು.

ಶೆಲ್ ವಿ–ಪವರ್ ಪೆಟ್ರೋಲ್ ಬಂಕ್‌ನ ಸಿಬ್ಬಂದಿಗಳು ಈ ಸಂದರ್ಭದಲ್ಲಿದ್ದರು.

ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆಯುವ ಪ್ರತಿಭಟನೆ ಕುರಿತು ಸಭೆ

» ಚಿತ್ರದುರ್ಗ

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಹಲವಾರು ಜಟಿಲ ಸಮಸ್ಯೆಗಳ ಕುರಿತು ಫೆ. 19 ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸುವ ಸಂಬಂಧ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೇಲ್ವಿಚಾರಣೆ ಮತ್ತು ಬಲವರ್ಧನ ಸಮಿತಿ ಕರ್ನಾಟಕ, ಕರ್ನಾಟಕ ದಲಿತ ಮಹಿಳಾ ವೇದಿಕೆ ಬೆಂಗಳೂರು ರಾಜ್ಯ ಸಮಿತಿ ಅಧ್ಯಕ್ಷೆ ಹಾಗೂ ಸಂಚಾಲಕಿ ಶ್ರೀಮತಿ ಪಿ.ಯಶೋಧರವರ ಆದೇಶದಂತೆ ಪ್ರವಾಸಿ ಮಂದಿರದಲ್ಲಿ ಇತ್ತೀಚೆಗೆ ಪೂರ್ವಭಾವಿ ಸಭೆ ನಡೆಸಿ ಪ್ರಮುಖ ವಿಚಾರಗಳ ಕುರಿತು ಚರ್ಚಿಸಲಾಯಿತು. ಜಿಲ್ಲಾ ಸಂಚಾಲಕರುಗಳಾದ ನರಸಿಂಹಮೂರ್ತಿ, ಮಂಜುಳ, ಪ್ರಧಾನ ಕಾರ್ಯದರ್ಶಿ ಎನ್.ಶಿವಣ್ಣ, ತಾಲ್ಲೂಕು ಅಧ್ಯಕ್ಷೆ ಸವಿತಾ, ಉಪಾಧ್ಯಕ್ಷ ರಾಮಚಂದ್ರಪ್ಪ, ದಾವಣಗೆರೆ ಜಿಲ್ಲಾಧ್ಯಕ್ಷೆ ಗೀತಮ್ಮ, ಬಳ್ಳಾರಿ ಜಿಲ್ಲಾಧ್ಯಕ್ಷ ಮಾರುತಿ, ಚಳ್ಳಕೆರೆ ತಾಲ್ಲೂಕು ಅಧ್ಯಕ್ಷ ಟಿ.ರಂಗನಾಥ್, ಪ್ರಧಾನ ಕಾರ್ಯದರ್ಶಿ ಎನ್.ಕುಶ, ಸಂಘಟನಾ ಕಾರ್ಯದರ್ಶಿ ವೆಂಕಟೇಶ್, ಅನಂತಕುಮಾರ್ ವಿ.ಟಿ. ತಿಪ್ಪೇಸ್ವಾಮಿ, ಹಿರಿಯೂರು ತಾಲ್ಲೂಕು ಅಧ್ಯಕ್ಷೆ ನಾಗರತ್ನ, ಕೇಶವಮೂರ್ತಿ ಇನ್ನು ಅನೇಕರು ಪೂರ್ವಭಾವಿ ಸಭೆಯಲ್ಲಿ ಹಾಜರಿದ್ದರು.

ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ – ಸಫಾಯಿ ಕರ್ಮಚಾರಿಗಳಿಗೆ ಕಾರ್ಯಾಗಾರ

ಸ್ವಚ್ಛತೆಯಲ್ಲಿ ಸಫಾಯಿ ಕರ್ಮಚಾರಿಗಳ ಶ್ರಮವಿದೆ

» ದಾವಣಗೆರೆ

ನಗರ, ಪಟ್ಟಣಗಳ ಸ್ವಚ್ಛತೆ ಕಾಪಾಡುವಲ್ಲಿ ಸಫಾಯಿ ಕರ್ಮಚಾರಿಗಳ ಶ್ರಮ, ಬೆವರಿದ್ದು ಇವರ ಶ್ರೇಯೋಭಿವೃದ್ಧಿಯಾಗಬೇಕೆಂದ ಿ ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದರು.

ಜಿಲ್ಲಾಡಳಿತ ಭವನದಲ್ಲಿನ ತುಂಗಭದ್ರಾ ಸಭಾಂಗಣದಲ್ಲಿ ಸಮಾಜ ಕಲ್ಯಾಣ ಇಲಾಖೆ, ರಾಷ್ಟ್ರೀಯ ಸಫಾಯಿ ಕರ್ಮಚಾರಿ ಹಣಕಾಸು ಮತ್ತು ಅಭಿವೃದ್ಧಿ ನಿಗಮ ಹಾಗೂ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ ಹಾಗೂ ಮಹಾನಗರ ಪಾಲಿಕೆ ಇವರ ಸಹಯೋಗದಲ್ಲಿ ಸಫಾಯಿ ಕರ್ಮಚಾರಿಗಳಿಗೆ ಇರುವ ಯೋಜನೆಗಳು ಹಾಗೂ ಸೌಲಭ್ಯಗಳ ಕುರಿತ ಕಾರ್ಯಗಾರದಲ್ಲಿ ಮಾತನಾಡಿದರು.

ಸೈನಿಕರು ದೇಶರಕ್ಷಣೆ ಮಾಡುವ ಮೂಲಕ ಹೊರಗಿನ ಶತ್ರುಗಳಿಂದ ದೇಶ ರಕ್ಷಣೆ ಮಾಡುವರು. ಅದೇ ರೀತಿ ದೇಶದೊಳಗಿನ ಸ್ವಚ್ಛತೆ, ಅನೈರ್ಮಲ್ಯತೆಯನ್ನು ಹೋಗಲಾಡಿಸುವ ಕೆಲಸವನ್ನು ಸಫಾಯಿ ಕರ್ಮಚಾರಿಗಳು ಮಾಡುತ್ತಾರೆ. ಈ ಕರ್ಮಚಾರಿಗಳು ಮಾಡಿದ ಕೆಲಸದಿಂದ ಕ್ರಿಮಿ, ಕೀಟಗಳ ನಿಯಂತ್ರಣ, ಸಾಂಕ್ರಾಮಿಕ ರೋಗಳಿಂದ ಮುಕ್ತಿ ಹೊಂದಿ ಜನರು ತಮ್ಮ ಆರೋಗ್ಯ ರಕ್ಷಣೆ ಮಾಡಿಕೊಳ್ಳಲು ಸಹಕಾರಿಯಾಗಿದೆ. ಇಂತಹ ಕಾರ್ಮಿಕರಿಗೆ ಸರ್ಕಾರದಿಂದ ರೂಪಿಸಿರುವ ಯೋಜನೆಗಳನ್ನು ತಲುಪಿಸುವ ಮೂಲಕ ಇವರ ಶ್ರೇಯೋಭಿವೃದ್ಧಿ ಮಾಡಬೇಕಾಗಿದೆ ಎಂದರು.ರಾಷ್ಟ್ರೀಯ ಸಫಾಯಿ ಕರ್ಮಚಾರಿ ಹಣಕಾಸು ಮತ್ತು ರಾಜ್ಯ ಸಫಾಯಿ ಕರ್ಮಚಾರಿ ಆಭಿವೃದ್ಧಿ ನಿಗಮದಿಂದ ಸಿಗುವ ಸೌಲಭ್ಯಗಳ ಕುರಿತು ಮಾಹಿತಿ ನೀಡುವ ಮೂಲಕ ಯೋಜನೆಗಳ ಸದುಪ ಯೋಗ ಮಾಡಿಕೊಳ್ಳಲು ಏರ್ಪಡಿಸಲಾಗಿರುವ ಈ ಕಾರ್ಯಗಾರ ಅತ್ಯುತ್ತಮವಾಗಿದ್ದು ಇದನ್ನು ಸದ್ವಳಕೆ ಮಾಡಿಕೊಳ್ಳಲು ಕಿವಿಮಾತು ಹೇಳಿದರು.

ಸಫಾಯಿ ಕರ್ಮಚಾರಿಗಳಿಗೆ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದಿಂದ ಸ್ವಯಂ ಉದ್ಯೋಗ ಯೋಜನೆಯಡಿ ಒಂದು ಲಕ್ಷದವರೆಗೆ ಶೇ 50 ಸಹಾಯಧನದಡಿ ನೇರ ಸಾಲ, ಉದ್ಯಮಶೀಲತಾ ಯೋಜನೆಯಡಿ ರೂ.2 ಲಕ್ಷದವರೆಗೆ ಸಹಾಯಧನದಡಿ ಬ್ಯಾಂಕಿನ ಮೂಲಕ ಸಾಲ, ಸರಕು ಸಾಗಾಣಿಕ ವಾಹನ ಖರೀದಿಗೆ ರೂ.3.50 ಲಕ್ಷ ಸಹಾಯಧನದಡಿ ಬ್ಯಾಂಕಿನ ಮೂಲಕ ಸಾಲ, ಮೈಕ್ರೋ ಕ್ರೆಡಿಟ್ ಯೋಜನೆಯಡಿ ಮಹಿಳಾ ಸ್ವಸಹಾಯ ಸಂಘಗಳ ಆರ್ಥಿಕ ಚಟುವಟಿಕೆಗಳಿಗಾಗಿ ಪ್ರತಿ ಸದಸ್ಯರಿಗೆ ರೂ.25 ಸಾವಿರದವರೆಗೆ ಇದರಲ್ಲಿ ರೂ.15 ಸಾವಿರ ಸಹಾಯಧನ ಹಾಗೂ ರೂ.10 ಸಾವಿರ ಬೀಜಧನವಾಗಿ ನೀಡಲಾಗುತ್ತದೆ.

ಭೂ ಒಡೆತನ ಯೋಜನೆಯಡಿ ವಾಸಸ್ಥಳದಿಂದ 10 ಕಿ.ಮಿ.ಒಳಗೆ 2 ಎಕರೆ ಖುಷ್ಕಿ ಅಥವಾ 1 ಎಕರೆ ನೀರಾವರಿ ಭೂಮಿ ನೀಡುವ ಯೋಜನೆ ಇದಾಗಿದೆ. ಪೌರ ಕಾರ್ಮಿಕ, ಸಫಾಯಿ ಕರ್ಮಚಾರಿ ಮಕ್ಕಳಿಗೆ ಶಿಶುಪಾಲನಾ ಕೇಂದ್ರ ಸ್ಥಾಪನೆಯಡಿ ಪೌರ ಕಾರ್ಮಿಕರು ಕೆಲಸಕ್ಕೆ ತೆರಳುವುದರಿಂದ ಅವರ 6 ತಿಂಗಳ ಮಕ್ಕಳಿಂದ 6 ವರ್ಷದವರೆಗೆ ಮಕ್ಕಳ ಲಾಲನೆ, ಪಾಲನೆ ಮಾಡಲು 50 ಮಕ್ಕಳಿಗೆ ಒಂದು ಘಟಕವಾಗಿ ಶಿಶುಪಾಲನಾ ಘಟಕ ತೆರೆಯಲಾಗುತ್ತದೆ. ಅರಿವು ಜಾಗೃತಿ, ಕೌಶಲ್ಯಾಭಿವೃದ್ಧಿ ತರಬೇತಿ ನೀಡಲಾಗುತ್ತದೆ ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ನಾಗರಾಜ್ ಯೋಜನೆಗಳ ವಿವರ ನೀಡಿದರು. ಪಾಲಿಕೆ ಆಯುಕ್ತರಾದ ರೇಣುಕಾ, ಅಭಿವೃದ್ಧಿ ನಿಗಮದ ಬಸವರಾಜ್, ಲೀಡ್ ಬ್ಯಾಂಕ್ ಮ್ಯಾನೇಜರ್ ಪ್ರಕಾಶ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹಂತೇಶ್, ರಾಷ್ಟ್ರೀಯ ಸಫಾಯಿ ಕರ್ಮಚಾರಿ ಹಣಕಾಸು ಮತ್ತು ಅಭಿವೃದ್ಧಿ ನಿಗಮದ ಸಹಾಯಕ ಪ್ರಧಾನ ವ್ಯವಸ್ಥಾಪಕ ಕೃಷ್ಣಕುಮಾರ್ ಭಾಗವತ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.ಈ ವೇಳೆ ಸಂವಿಧಾನ ಜಾಗೃತಿ ಜಾಥಾ ಅಂಗವಾಗಿ ಸಂವಿಧಾನದ ಪ್ರಸ್ತಾವನೆ ಓದುವ ಮೂಲಕ ಪ್ರತಿಜ್ಞಾವಿಧಿ ಸ್ವೀಕರಿಸಲಾಯಿತು.

ಗೌರವಧನ ಹೆಚ್ಚಳಕ್ಕೆ ಅತಿಥಿ ಉಪನ್ಯಾಸಕರ ಮನವಿ

» ಹೊಸದುರ್ಗ

ಹೊಸದುರ್ಗ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರು ತಮಗೆ ಸೇವಾ ಭದ್ರತೆ ಒದಗಿಸುವುದು ಸೇರಿದಂತೆ ಇನ್ನಿತರ ಬೇಡಿಕೆಗಳನ್ನು ಕೂಡಲೇ ಈಡೇರಿಸಬೇಕು ಎಂದು ಒತ್ತಾಯಿಸಿ ಗುರುವಾರ ಶಾಸಕರಾದ ಬಿ.ಜಿ. ಗೋವಿಂದಪ್ಪ ಅವರಿಗೆ ಮನವಿ ಸಲ್ಲಿಸಿದರು.

ನಾವು ಸರಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಹಲವಾರು ವರ್ಷಗಳಿಂದ ಕಾರ್ಯನಿರ್ವಹಿಸಿದ್ದೇವೆ. ಸದ್ಯ ನಮ್ಮ ಗೌರವಧನ 12,000 ರೂ. ಇದ್ದು ನಮ್ಮ ಕುಟುಂಬದ ನಿರ್ವಹಣೆಗೆ ಸಾಲುತ್ತಿಲ್ಲ. ನಮ್ಮ ಮಾಸಿಕ ಗೌರವ ಧನವನ್ನು ಕನಿಷ್ಠ 30 ಸಾವಿರಕ್ಕೆ ಏರಿಸಬೇಕು, ಸೇವಾ ಭದ್ರತೆಯನ್ನು ಒದಗಿಸಬೇಕು. ಕಳೆದ ವರ್ಷ ಸೇವೆ ಸಲ್ಲಿಸಿರುವ ಅತಿಥಿ ಉಪನ್ಯಾಸಕರನ್ನೇ ಮುಂದುವರಿಸಬೇಕು. ಕಾಯಂ ಉಪನ್ಯಾಸಕರ ನೇಮಕಾತಿ ಸಂದರ್ಭದಲ್ಲಿ ಕೃಪಾಕ ಶೆ 50ರಷ್ಟು ನೀಡಬೇಕು. ಪ್ರತಿ ತಿಂಗಳು ಗೌರವಧನ ನೇರವಾಗಿ ಖಾತೆಗೆ ನೀಡಬೇಕು. ಪದವಿ ಪೂರ್ವ ಶಿಕ್ಷಣ ಇಲಾಖೆ ಸುತ್ತೋಲೆ ಪ್ರಕಾರ ವಾರಕ್ಕೆ 10 ಗಂಟೆ ಕೆಲಸ ನೀಡಬೇಕು. ಅತಿಥಿ ಉಪನ್ಯಾಸಕರಿಗೆ ವರ್ಷಪೂರ್ತಿ ವೇತನ ನೀಡಬೇಕು. ಅತಿಥಿ ಉಪನ್ಯಾಸಕರ ಗುರುತಿನ ಚೀಟಿ ಮತ್ತು ಸೇವಾ ಪ್ರಮಾಣ ಪತ್ರ ನೀಡಬೇಕು. ಅತಿಥಿ ಉಪನ್ಯಾಸಕರ ಕಾಯಂ ಭರವಸೆಯನ್ನು ಪ್ರಣಾಳಿಕೆಯಲ್ಲಿ ನೀಡಿದಂತೆ ಈಡೇರಿಸಬೇಕು. ಅತಿಥಿ ಉಪನ್ಯಾಸಕರನ್ನು ಮೌಲ್ಯಮಾಪನ ಕಾರ್ಯದಲ್ಲಿ ನೇಮಿಸುವುದನ್ನು ಮುಂದುವರಿಸಬೇಕು. ಶಾಸಕರಾದ ತಾವುಗಳು ಮುಖ್ಯಮಂತ್ರಿ ಹಾಗೂ ಸಂಬಂಧಪಟ್ಟ ಸಚಿವರ ಗಮನಕ್ಕೆ ನಮ್ಮ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಬೇಕೆಂದು ಆಗ್ರಹಿಸಿದರು.

ಮನವಿ ಸ್ವೀಕರಿಸಿದ ಶಾಸಕ ಬಿ.ಜಿ.ಗೋವಿಂದಪ್ಪ ಅವರು ನಮ್ಮ ಸರಕಾರ ಡಿಗ್ರಿ ಕಾಲೇಜು ಅತಿಥಿ ಉಪನ್ಯಾಸಕರ ಗೌರವಧನ ಹೆಚ್ಚಿಸಿದೆ. ಅದೇ ರೀತಿ ಪದವಿ ಪೂರ್ವ ಕಾಲೇಜಿನ ಅತಿಥಿ ಉಪನ್ಯಾಸಕರ ಈ ಬೇಡಿಕೆಗಳ ಈಡೇರಿಕೆಗೆ ಅಗತ್ಯ ಕ್ರಮಕೈಗೊಳ್ಳುವಂತೆ ಶಿಕ್ಷಣ ಇಲಾಖೆ ಸಚಿವರ ಗಮನಕ್ಕೆ ತರುತ್ತೇನೆ ಎಂದು ಭರವಸೆ ನೀಡಿದರು.ಈ ಸಂದರ್ಭದಲ್ಲಿ ಪ್ರಾಂಶುಪಾಲರಾದ ಎಂ.ಜಿ.ವಿಶ್ವನಾಥ್, ಅತಿಥಿ ಉಪನ್ಯಾಸಕರಾದ ಸುಧಾ ಸುರೇಶ್, ಚಂದನ ಹಾಜರಿದ್ದರು.

ಧಾರ್ಮಿಕ ವಿಚಾರಧಾರೆ, ಅವುಗಳ ಆಚರಣೆಯಿಂದ ಎಲ್ಲರ ಬದುಕಿಗೆ ನೆಮ್ಮ: ನಾಲ್ವಡಿಶಾಂತಲಿಂಗ ಸ್ವಾಮೀಜಿ

» ಚಳ್ಳಕೆರೆ

ನಾವು ಆಚರಣೆ ಮಾಡುವ ಎಲ್ಲಾ ಧಾರ್ಮಿಕ ಕಾರ್ಯಕ್ರಮಗಳು ನಮಗೆ ನಮ್ಮ ಹಿರಿಯರು ನೀಡಿದ ಕೊಡುಗೆ ಮತ್ತು ಮಾರ್ಗದರ್ಶನವಾಗಿದೆ. ಧಾರ್ಮಿಕ ಕಾರ್ಯಕ್ರಮಗಳಿಂದ ನಮಸ್ಸಿನ ಪರಿಶುದ್ಧತೆಯಲ್ಲದೆ, ಸಾಮಾಜಿಕವಾಗಿಯೂ ನಾವು ಶಕ್ತರಾಗುತ್ತೇವೆ.ದೇವರು ಮತ್ತು ಗುರುವನ್ನು ನಂಬಿದ ಸಂತತಿ ನಮ್ಮದು. ನಾವೆಲ್ಲರೂ ಧಾರ್ಮಿಕ ವಿಚಾರಧಾರೆಗಳನ್ನು ಜೀವನದ್ದೂದಕ್ಕೂ ತಪ್ಪದೆ ಅಳವಡಿಸಿಕೊಂಡು ನಡೆಯಬೇಕು ಎಂದು ಕಣ್ವಕುಪ್ಪೆಗವಿಮಠದ ನಾಲ್ವಡಿಶಾಂತಲಿಂಗಶಿವಾಚಾರ್ಯಸ್ವಾಮೀಜಿ ತಿಳಿಸಿದರು. ಅವರು, ನರಹರಿನಗರದ ವೆಂಕಟಸಾಯಿ ಸೇವಾ ಟ್ರಸ್ಟ್‌ನ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿಯವರ ನಿವಾಸಕ್ಕೆ ಭೇಟಿ ನೀಡಿ ಅಲ್ಲಿ ಪೂಜಾವಿಧಿವಿಧಾನಗಳನ್ನು ನಡೆಸಿ ನಂತರ ಪತ್ರಿಕೆಯೊಂದಿಗೆ ಮಾತನಾಡಿದರು. ದೇಶದಲ್ಲಿ ಇಂದು ಧಾರ್ಮಿಕ ಪ್ರಕರತೆಯ ಬೆಳಕು ಎಲ್ಲರಿಗೂ ಕಾಣುವಂತಾಗಿದೆ. ಅಯೋಧ್ಯೆಯ ಶ್ರೀರಾಮಜನ್ಮಸ್ಥಾನದಲ್ಲಿ ರಾಮಮಂದಿರ ನಿರ್ಮಾಣ ಮಾಡುವ ಮೂಲಕ ನಾವೆಲ್ಲರೂ ರಾಮನ ಪರಂಪರೆಯನ್ನು ಅಳವಡಿಸಿಕೊಂಡಿದ್ದೇವೆಂಬುವುದನ್ನು ಸಾಬೀತು ಪಡಿಸಿದಂತಾಗಿದೆ. ನಮ್ಮೆಲ್ಲಾರ ಸಂಪ್ರದಾಯ, ಸಂಸ್ಕೃತಿ ಪ್ರಭು ಶ್ರೀರಾಮಚಂದ್ರನ್ ನಮಗೆ ದಯಪಾಲಿಸಿದ ವರಗಳು ಎಂದರು. ವೆಂಕಟಸಾಯಿ ಸೇವಾ ಟ್ರಸ್ಟ್‌ನ ಅಧ್ಯಕ್ಷ ಬಿ.ಸಿ.ಸಂಜೀವಮೂರ್ತಿ ಮಾತನಾಡಿ, ಸ್ವಾಮೀಜಿಯವರು ಕಾರ್ಯನಿಮಿತ್ತ ಚಳ್ಳಕೆರೆ ಮೂಲಕ ಬೇರೆ ಊರಿಗೆ ಪ್ರವಾಸ ಕೈಗೊಳ್ಳುತ್ತಿರುವ ಬಗ್ಗೆ ಮಾಹಿತಿ ಪಡೆದು, ದೂರವಾಣಿಯಲ್ಲಿ ಸಂಪರ್ಕಿಸಿ ಆಹ್ವಾನಿಸಿದೆ. ಕರೆಗೆ ಹೋಗೋಟ್ಟು ಕೆಲವೇ ಹೊತ್ತಾದರೂ ಆಗಮಿಸಿ ಧಾರ್ಮಿಕ ವಿಚಾರಗಳ ಬಗ್ಗೆ ತಮ್ಮದೇಯಾದ ರೀತಿಯಲ್ಲಿ ನಮಗೆ ಉತ್ತಮ ಮಾರ್ಗದರ್ಶನ ನೀಡಿದ್ದಾರೆ. ಭಗವಾನ್ ಸಾಯಿಬಾಬಾ ಮಂದಿರದ ಎಲ್ಲಾ ಕಾರ್ಯಕ್ರಮಗಳಲ್ಲೂ ಅವರು ಸ್ವಯಂ ಪ್ರೇರಣೆಯಿಂದ ಭಾಗವಹಿಸುತ್ತಾ ಬಂದಿದ್ದಾರೆ. ಟ್ರಸ್ಟ್‌ನ ಎಲ್ಲಾ ನಿರ್ದೇಶಕರ ಪರವಾಗಿ ಅವರನ್ನು ಸನ್ಮಾನಿಸಿರುವುದಾಗಿ ತಿಳಿಸಿದರು.

ಬಿ.ಸಿ.ಸತೀಶ್‌ಕುಮಾರ್, ಹೂವಿನ ಜಗದೀಶ್, ಕೆ.ನಾಗೇಶ್, ರವಿಪ್ರಸಾದ್, ಬಿ.ಸಿ.ವೆಂಕಟೇಶ್, ಕೆ.ಎಂ.ಜಗದೀಶ್, ಇಂಧುಶೇಖರ ಮುಂತಾದವರು ಉಪಸ್ಥಿತರಿದ್ದರು.

ಬೊಮ್ಮನಕುಂಟೆ: ಓಬಳನರಸಿಂಹಸ್ವಾಮಿ ವಿಗ್ರಹ ಪ್ರತಿಷ್ಠಾಪನೆ ಫೆ.12ರಂದು

» ಚಳ್ಳಕೆರೆ

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಬೊಮ್ಮನಕುಂಟೆ ಗ್ರಾಮದ ಶ್ರೀಓಬಳನರಸಿಂಹಸ್ವಾಮಿ ದೇವಸ್ಥಾನ ಟ್ರಸ್ಟ್‌ನವರು ನೂತನವಾಗಿ ಶ್ರೀಓಬಳನರಸಿಂಹಸ್ವಾಮಿಯ ದೇವರ ವಿಗ್ರಹವನ್ನು ಸಿದ್ದಪಡಿಸಿದ್ದು ಫೆ.12ರ ಸೋಮವಾರ ಬೆಳಗ್ಗೆ 10ಕ್ಕೆ ವಿಗ್ರಹ ಪ್ರತಿಷ್ಠಾಪನಾ ಕಾರ್ಯ ಹಮ್ಮಿಕೊಳ್ಳಲಾಗಿದೆ ಎಂದು ಟ್ರಸ್ಟ್ ನಿರ್ದೇಶಕರು ತಿಳಿಸಿದ್ದಾರೆ.

ಅವರು, ಈ ಬಗ್ಗೆ ಮಾಹಿತಿ ನೀಡಿ, ವಿಗ್ರಹ ಪ್ರತಿಷ್ಠಾಪನೆ ಕಾರ್ಯಕ್ರಮಕ್ಕೆ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಚಾಲನೆ ನೀಡಲಿದ್ದು, ಶ್ರೀಓಬಳನರಸಿಂಹಸ್ವಾಮಿದೇವರ ಎಲ್ಲಾ ಸದ್ಭಕ್ತರು ಪೂಜಾ ಕಾರ್ಯದಲ್ಲಿ ಪಾಲ್ಗೊಳ್ಳುವಂತೆ ಮನವಿ ಮಾಡಲಾಗಿದೆ. ಫೆ. 11 ಮತ್ತು 12 ಎರಡು ದಿನಗಳ ಕಾಲ ಕಾರ್ಯಕ್ರಮಗಳು ನಡೆಯಲಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಸ್ವಾಮಿಕೃಪೆಗೆ ಪಾತ್ರರಾಗುವಂತೆ ಮನವಿ ಮಾಡಲಾಗಿದೆ.

ಪ್ರಮುಖ ಸುದ್ದಿ

ಗ್ಯಾರಂಟಿಗಳು ಯಾವುದೇ ಕಾರಣಕ್ಕೂ ನಿಲ್ಲುವುದಿಲ್ಲ: ಸಿಎಂ

» ಹೊಸದುರ್ಗ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೊಸದುರ್ಗದ ಬ್ರಹ್ಮ ವಿದ್ಯಾನಗರ ಸುಕ್ಷೇತ್ರದಲ್ಲಿ ಜಗದ್ಗುರು ಶ್ರೀ ಶ್ರೀ ಡಾ.ಪುರುಷೋತ್ತಮಾನಂದಪುರಿ ಮಹಾಸ್ವಾಮಿಗಳ 25ನೇ ವರ್ಷದ ಪಟ್ಟಾಭಿಷೇಕದಚರಜತ ಮಹೋತ್ಸವ ಮತ್ತು ರಾಷ್ಟ್ರೀಯ ಭಗೀರಥ ಜಯಂತ್ಸೋತ್ಸ